ವಿಜಯಪುರ | ಸಂಪುಟ 02 | ಸಂಚಿಕೆ 216 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ Editor: Indushekhar Manur

editor.udayarashmi@gmail.com RNI NO: KARKAN/2023/86203 ರವಿವಾರ, ಅಕ್ಟೋಬರ್ 20, 2024



ಜೆಡಿಎಸ್ ಗೆ ನಾವು ಪುನರ್ಜನ್ಮ ನೀಡಿದ್ದೇವೆ. ಹೀಗಾಗಿ ಹೆಚ್.ಡಿ ಕುಮಾರಸ್ವಾಮಿ ಚನ್ನಪಟ್ಟಣ ಟಿಕೆಟ್ ತ್ಯಾಗ ಮಾಡಲಿ, ನಮಗೆ ಕುಮಾರಸ್ವಾಮಿ, ದೇವೇಗೌಡರ ಶಕ್ತಿ ಬೇಕು. ಮೈತ್ರಿಯಿಂದ ಎರಡೂ ಪಕ್ಷದವರಿಗೆ ಲಾಭ ಆಗಿದೆ. ನಮ್ಮ ಪಕ್ಷದವರಿಗೆ ಟಿಕೆಟ್ ಕೊಡಬೇಕು."

■ ಬಸನಗೌಡ ಪಾಟೀಲ್, ಯತ್ನಾಳ
ಬಿಜೆಪಿ ಶಾಸಕರು, ವಿಜಯಪುರ

# ಪಿಎಂ ಬಿಮಾ ಯೋಜನೆಯಡಿ ನಿಗದಿತ ಗುರಿ ಪ್ರಗತಿ ಸಾಧಿಸಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಬಿಮಾ ಸುರಕ್ಷಾ ಯೋಜನೆ ಹಾಗೂ ಪ್ರಧಾನಮಂತ್ರಿ ಜೀವನಜ್ಯೋತಿ ಬಿಮಾ ಯೋಜನೆಯಡಿ ಹೆಚ್ಚಿನ ಸಂಖ್ಯೆಯಲ್ಲಿ ನೊಂದಣಿ ಮಾಡಿಸಿ ನಿಗದಿತ ಗುರಿ ಸಾಧಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚನೆ ನೀಡಿದರು.

ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪ್ರಧಾನಮಂತ್ರಿ ಸುರಕ್ಷಾ, ಪ್ರಧಾನಮಂತ್ರಿ ಜೀವನಜ್ಯೋತಿ ಸೇರಿದಂತೆ ವಿವಿಧ ಬಿಮಾ ಯೋಜನೆಗಳ ಕುರಿತ ಪ್ರಗತಿ ಪರಿಶೀಲನೆ ಹಾಗೂ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಕೇಂದ್ರ ಸರ್ಕಾರದ ಬಿಮಾ ಯೋಜನೆಗಳು ಯಾವುದೇ ನಿಗದಿತ ವರ್ಗಗಳಿಗೆ ಮೀಸಲಾಗದೇ, ಸರ್ಕಾರಿ ನೌಕರರು ಸೇರಿದಂತೆ ಎಲ್ಲ ವರ್ಗದ ಜನರನ್ನು ಈ ಯೋಜನೆಯಡಿ ನೊಂದಣಿಗೆ ಅವಕಾಶವಿದ್ದು, ಜಿಲ್ಲೆಗೆ ಬಿಮಾ ಯೋಜನೆಯಡಿ 10.25 ಲಕ್ಷ ಗುರಿ ಎದುರು, 2.75 ಲಕ್ಷ ನೊಂದಣಿ ಮಾಡಿಸಲಾಗಿದೆ. ಎಲ್ಲ ಇಲಾಖೆ ಜಿಲ್ಲಾ ಮಟ್ಟದ, ತಾಲೂಕಾ ಮಟ್ಟದ ಅಧಿಕಾರಿ, ಸಿಬ್ಬಂದಿಗಳ ನೊಂದಣಿ ಮಾಡಿಸಿ ನಿಗದಿತ ಗುರಿ ಸಾಧಿಸುವಂತೆ ಅವರು ಸೂಚನೆ ನೀಡಿದರು.

ವಿವಿಧ ಇಲಾಖೆಗಳಡಿ ಹಲವು ಸೌಲಭ್ಯಕ್ಕಾಗಿ ಬರುವ ಫಲಾನುಭವಿಗಳಿಗೆ ಪ್ರಧಾನಮಂತ್ರಿ ಬಿಮಾ ಸುರಕ್ಷಾ ಯೋಜನೆ ಹಾಗೂ ಪ್ರಧಾನಮಂತ್ರಿ ಜೀವನಜ್ಯೋತಿ ಬಿಮಾ ಯೋಜನೆ ಕುರಿತು ಮಾಹಿತಿ ಒದಗಿಸಿ, ಈ ಯೋಜನೆಯಡಿ ನೊಂದಾಯಿಸಲು ಕ್ರಮ ವಹಿಸಬೇಕು. ವಿವಿಧ ಇಲಾಖೆ ಅಧಿಕಾರಿಗಳು, ತಮ್ಮ ಹಂತದ ಸಿಬ್ಬಂದಿ, ಡಿ-ಗ್ರೂಪ್ ನೌಕರರು, ಹೊರಗುತ್ತಿಗೆ ನೌಕರರು, ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ನೊಂದಣಿ ಮಾಡಿಸಿ ವರದಿ ಸಲ್ಲಿಸುವಂತೆ ಅವರು ಸೂಚನೆ ನೀಡಿದರು.

ಬಿಮಾ ಯೋಜನೆಗಳ ಕುರಿತು ಸಾರ್ವಜನಿಕರಲ್ಲೂ ವ್ಯಾಪಕವಾಗಿ ತಿಳುವಳಿಕ ಮೂಡಿಸಬೇಕು. ವಿವಿಧ ಇಲಾಖೆಗಳ ಸಹಯೋಗದಲ್ಲಿ ಹೆಚ್ಚಿನ ನೊಂದಣಿ ಮಾಡಿಸಿ, ನಿಗದಿತ ಗುರಿ ಸಾಧಿಸಬೇಕು. ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿ-ಸಿಬ್ಬಂದಿಗಳು, ವಿವಿಧ ಇಲಾಖೆ ಹಾಸ್ಟೇಲ್ ವಾರ್ಡನ್‌ಗಳು, ಕಂದಾಯ ಇಲಾಖೆ ಗ್ರಾಮ ಪಂಚಾಯತ್ ಅಧಿಕಾರಿಗಳು, ಗ್ರಾಮ ಲೆಕ್ಕಿಗರು, ಸಹಾಯಕರು, ಶಿಕ್ಷಣ ಇಲಾಖೆ ಶಿಕ್ಷಕರು ಸೇರಿದಂತೆ ಎಲ್ಲ ಸಿಬ್ಬಂದಿಗಳನ್ನು ಕಡ್ಡಾಯವಾಗಿ ಈ ಯೋಜನೆಯಡಿ ನೊಂದಣಿ ಮಾಡಿಸಬೇಕು. ಬಿಮಾ ಯೋಜನೆಯಡಿ ನೊಂದಣಿಗೆ ಏನಾದರೂ ಸಮಸ್ಯೆ ಬಂದಲ್ಲಿ ಅಧಿಕಾರಿಗಳು ಜಿಲ್ಲಾ ಅಗ್ರಣೀಯ ಬ್ಯಾಂಕ್ ವ್ಯವಸ್ಥಾಪಕರ ಮೊ: 944986073 ಸಂಖ್ಯೆಗೆ ಸಂಪರ್ಕಿಸುವಂತೆ ತಿಳಿಸಲಾಯಿತು.

### ಬಿಮಾ ಯೋಜನೆಗಳ ಕುರಿತ ಪ್ರಗತಿ ಪರಿಶೀಲನೆ ಹಾಗೂ ಪೂರ್ವಸಿದ್ಧತಾ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚನೆ



### ಅಧಿಕಾರಿಗಳಿಂದ ಮಾಹಿತಿ

**ಜಿಲ್ಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ 2195 ಅಂಗನವಾಡಿ ಕಾರ್ಯಕರ್ತೆ, 2050 ಅಂಗನವಾಡಿ ಸಹಾಯಕಿಯರು, 10179 ಪೌರಕಾರ್ಮಿಕರು ಮತ್ತು ಗುತ್ತಿಗೆ ನೌಕರರು, 1750 ಆಶಾ ಕಾರ್ಯಕರ್ತೆ, 4500 ಮಧ್ಯಾಹ್ನದ ಬಿಸಿಯೂಟ ಸಿಬ್ಬಂದಿಗಳಿಗೆ ಬಿಮಾ ಯೋಜನೆ ನೊಂದಣಿ ಮಾಡಿಸಲಾಗಿದೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.**

ಆಧಾರ ಕಾರ್ಡ ಹಾಗೂ ಬ್ಯಾಂಕ್ ಖಾತೆ ಸಂಖ್ಯೆಯೊಂದಿಗೆ ಬಿಮಾ ಯೋಜನೆಯಡಿ ನೊಂದಾಯಿಸಬಹುದಾಗಿದ್ದು, ಪ್ರಧಾನಮಂತ್ರಿ ಬಿಮಾ ಸುರಕ್ಷಾ ಯೋಜನೆಯಡಿ 18 ರಿಂದ 70 ವರ್ಷ ವಯೋಮಾನದವರು, ಪ್ರತಿ ವರ್ಷ ಕೇವಲ 20 ರೂ. ವಿಮೆ ಮೊತ್ತ ಪಾವತಿಸಬೇಕು. ಈ ಯೋಜನೆಯಡಿ ನೊಂದಾಯಿಸಿಕೊಂಡ ಫಲಾನುಭವಿಗಳ ವಾರಸುದಾರರಿಗೆ 45 ದಿನಗಳೊಳಗಾಗಿ ಅಕ್ಸಿಡೆಂಟಲ್ ಮರಣ-ಕ್ಕೆ 2ಲಕ್ಷ ರೂ. ಪರಿಹಾರ ಹಾಗೂ ಪ್ರಧಾನಮಂತ್ರಿ ಜೀವನಜ್ಯೋತಿ ಬಿಮಾ ಯೋಜನೆಯಡಿ 18 ರಿಂದ 50 ವರ್ಷ ವಯೋಮಾನದವರು ಪ್ರತಿವರ್ಷಕ್ಕೆ 436 ರೂ. ವಿಮೆ ಮೊತ್ತ ಪಾವತಿಸಬೇಕು. ಈ ಯೋಜನೆಯ ಫಲಾನುಭವಿಗಳ ನಾಮನಿರ್ದೇಶಿತರಿಗೆ ಸಹ 2ಲಕ್ಷ ರೂ. ಪರಿಹಾರ ದೊರೆಯಲಿದೆ ಎಂದು ಲೀಡ್ ಬ್ಯಾಂಕ್ ವ್ಯವಸ್ಥಾಪಕರು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸೋಮಲಿಂಗ್ ಗೆಣ್ಣೂರ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ಜಿಲ್ಲಾ ಪಂಚಾಯತಿಯ ಯೋಜನಾ ನಿರ್ದೇಶಕ ಬಿ.ಎಸ್. ರಾಠೋಡ ಸೇ-ರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಚಿವ ಬೈರತಿ ಸುರೇಶರಿಂದ ಮುಡಾ ಕಡತಗಳ ಭಸ್ಮ: ಶೋಭಾ

■ ಉದಯರಶ್ಮಿ ದಿನಪತ್ರಿಕೆ



**ಬೆಂಗಳೂರು** : ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ರಕ್ಷಿಸುವ ಸಲುವಾಗಿ ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಅವರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಪ್ರಕರಣ-ಕ್ಕೆ ಸಂಬಂಧಿಸಿದ ಎಲ್ಲಾ ಕಡತಗಳನ್ನು ಸುಟ್ಟು ಹಾಕಿದ್ದಾರೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆರೋಪಿಸಿದ್ದಾರೆ.

ಬಿಜೆಪಿ ಪಕ್ಷದ ಕಚೇರಿಯಲ್ಲಿ ಮಾಧ್ಯಮದವರನ್ನು ಉದ್ದೇಶಿಸಿ ಮಾತನಾಡಿದ ಅವರು, 'ಸಿಎಂ ಸಿದ್ದರಾಮಯ್ಯ ಅವರೇ, ನಿಮ್ಮ ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಮೈಸೂರಿಗೆ ಹೋಗಿದ್ದರು. 1997ರ ನಂತರದ ಎಲ್ಲಾ ಕಡತಗಳನ್ನು ಕಾರಿನಲ್ಲಿ ತುಂಬಿಕೊಂಡು ಹೋಗಿದ್ದರು.

ಆ ಕಡತಗಳು ಎಲ್ಲಿ ಹೋದವು? ನಿಮ್ಮ ರಕ್ಷಣೆಗಾಗಿ ಮುಡಾದ ಎಲ್ಲಾ ಕಡತಗಳು ಸಚಿವ ಸುರೇಶ್ ಒಯ್ದು ಸುಟ್ಟು ಹಾಕಿದ್ದಾರಾ ಎಂದು ಪ್ರಶ್ನಿಸಿದ್ದಾರೆ.

ಇದೇ ವೇಳೆ, ಸಿಎಂ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು. ಅಷ್ಟೇ ಅಲ್ಲದೆ ಬೈರತಿ ಸುರೇಶ್ ಅವರನ್ನು ಬಂಧಿಸಬೇಕು ಎಂದು ಒತ್ತಾಯಿಸಿದರು. ಕೇವಲ ಸಿದ್ದರಾಮಯ್ಯನವರ ಬಾಮೈದ ಹಾಗೂ ಜಮೀನು ಮಾಲೀಕ ಹಾಗೂ ನಾಲ್ಕನೇ ಆರೋಪಿ ಜೆ. ದೇವರಾಜು ವಿರುದ್ಧ ತನಿಖೆ ನಡೆಸುವುದಷ್ಟೇ ಅಲ್ಲ, ಸಿಎಂ ಸಿದ್ದರಾಮಯ್ಯ ಮತ್ತು ಅವರ ಪತ್ನಿ ಪಾರ್ವತಿ ವಿರುದ್ಧ ತನಿಖಾ ಸಂಸ್ಥೆಗಳು ತನಿಖೆ ನಡೆಸಬೇಕು ಎಂದು ಸಚಿವೆ ಒತ್ತಾಯಿಸಿದರು.

ಸಿಎಂ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ ಸಚಿವೆ, ಪ್ರಕರಣದ ತನಿಖೆ ನಡೆಸುತ್ತಿರುವ ಇಡಿ, ತಮ್ಮ ಕುಟುಂಬಕ್ಕೆ ಅನುಕೂಲ ಮಾಡಿಕೊಡಲು ಕಾನೂನನ್ನು ಬದಲಿಸಿದ್ದಾರೆ ಎಂದು ಹೇಳಿದೆ.



ಸಿಎಂ ರಾಜೀನಾಮೆಗೆ ಆಗ್ರಹ

"ಮುಡಾ ಹಗರಣ ಕುರಿತಂತೆ ರಾಜ್ಯಪಾಲರು 17ಎ ಅಡಿಯಲ್ಲಿ ನಿಮ್ಮ ವಿರುದ್ಧ ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಿದ್ದು ಇದನ್ನು ಪ್ರಶ್ನಿಸಿ ನೀವು ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದ್ದು, ವಿಶೇಷ ನ್ಯಾಯಾಲಯ ಸಹ ತನಿಖೆಗೆ ಆದೇಶಿಸಿದ ಬೆನ್ನಲ್ಲೇ ಲೋಕಾಯುಕ್ತ ಸಹ ತನಿಖೆ ಆರಂಭಿಸಿದೆ. ಇದರ ನಡುವೆ ಮುಡಾ ಅಧ್ಯಕ್ಷ ಕೆ.ಮರೀಗೌಡ ರಾಜೀನಾಮೆ ನೀಡಿದ್ದು ಸಾಕಾಗುವುದಿಲ್ಲ ನೈತಿಕ ಹೊಣೆಹೊತ್ತು ನೀಡು ರಾಜಿನಾಮೆ ನೀಡಬೇಕು."

■ ಶೋಭಾ ಕರಂದ್ಲಾಜೆ
ಕೇಂದ್ರ ಸಚಿವೆ

ಮೊದಲನೆಯದಾಗಿ ನೀವು ತೆಗೆದುಕೊಂಡಿರುವ ಜಮೀನು ಅಕ್ರಮವಾಗಿದೆ. ಮೂಲತಃ ಈ ಜಮೀನು ಪರಿಶಿಷ್ಟ ಜಾತಿಯ ವ್ಯಕ್ತಿಗೆ ಸೇರಿದ್ದು, ಜಮೀನು ಮಾಲೀಕ ಎಂದು ಹೇಳಿಕೊಂಡಿದ್ದ ದೇವರಾಜು ಎಂಬುವರಿಗೆ ಸೇ-ರಿದ್ದಲ್ಲ. ನಿಮಗೆ ಜಮೀನು ಹೇಗೆ ಸಿಕ್ಕಿತು? ನಿಮ್ಮ ಬಾಮೈದಗೆ ಈ ಭೂಮಿ ನಿಮಗೆ ಹೇಗೆ ಕೊಟ್ಟರು? ಎಂದು ಪ್ರಶ್ನಿಸಿದರು.

ಹಗರಣ ನಡೆದಾಗ ಸಿಎಂ ಸಿದ್ದರಾಮಯ್ಯ ಅವರೇ ನೀವು, ಒಂದಲ್ಲ ಒಂದು ಸಾಂವಿಧಾನಿಕ ಸ್ಥಾನದಲ್ಲಿ ಇದ್ದೀರಿ, ನೀವು ಪ್ರಧಾನ ಪ್ರದೇಶದಲ್ಲಿ ನಿವೇಶನಗಳನ್ನು ಮಂಜೂರು ಮಾಡಿ ಅವುಗಳನ್ನು ಹಿಂದಿರುಗಿಸಿದ್ದೀರಿ, ಸೈಟ್‌ಗಳನ್ನು ಹಿಂದಿರುಗಿಸುವುದೇ ಅಪರಾಧಕ್ಕೆ ಸಾಕ್ಷಿಯಾಗಿದೆ ಎಂದು ಕರಂದ್ಲಾಜೆ ವಾಗ್ದಾಳಿ ನಡೆಸಿದರು. ಮುಡಾ ಅಧ್ಯಕ್ಷ ಕೆ.ಮರೀಗೌಡ ಅವರ ರಾಜೀನಾಮೆಯನ್ನು ಏಕೆ ಅಂಗೀಕ-ರಿಸಿದ್ದೀರಿ ಎಂದು ನಾನು ಸಿಎಂ ಸಿದ್ದರಾಮಯ್ಯ ಅವರನ್ನು ಕೇಳಲು ಬಯಸುತ್ತೇನೆ. ಗೌಡರು ನಿಮ್ಮ ನಿಕಟವರ್ತಿಯಾಗಿದ್ದರು. ಹಗರಣದ ಹೊಣೆಗಾರಿಕೆ ಅವರ ಮೇಲೆ ಹೊ-ರಿಸಲು ನೀವು ಯೋಜಿಸುತ್ತಿದ್ದೀರಾ ಎಂದು ಪ್ರಶ್ನಿಸಿದ್ದಾರೆ.

**ಸಿಎಂ ಸಿದ್ದರಾಮಯ್ಯ ರಕ್ಷಿಸಲು ಹುನ್ನಾರ। ಸಿಎಂ ರಾಜೀನಾಮೆಗೆ ಆಗ್ರಹ। ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆರೋಪ**

# ಡಾ.ಲಕ್ಷ್ಮಣ, ಭಾಗ್ಯವಸು, ಮಲ್ಲಿಕಾರ್ಜುನ ಕಡಕೋಳಗೆ ಬೆರಗು ಪ್ರಶಸ್ತಿ

■ ಉದಯರಶ್ಮಿ ದಿನಪತ್ರಿಕೆ

ಆಯ್ಕೆಯಾಗಿದೆ.



ಡಾ.ಲಕ್ಷ್ಮಣ,



ಭಾಗ್ಯವಸು,



ಮಲ್ಲಿಕಾರ್ಜುನ ಕಡಕೋಳ,



ಪಿ.ನಂದಕುಮಾರ

**ಆಲಮೇಲ:** ವಿಜಯಪುರ ಜಿಲ್ಲೆ ಕಡಣಿಯ ಬೆರಗು ಪ್ರಕಾಶನ ಸಂಸ್ಥೆಯು ನೀಡುವ ರಾಜ್ಯಮಟ್ಟದ ಪ್ರೊ.ಎಚ್.ಟಿ.ಪೋತೆ ಹಸ್ತಪ್ರತಿ ಪ್ರಶಸ್ತಿಗೆ ಕಥಾ ವಿಭಾಗದಲಿ ಡಾ.ಲಕ್ಷ್ಮಣ ವಿ.ಎ ಅವರ 'ಜಿರಿ ಮಳೆಯ ಕಣ್ಣು' ಹಾಗೂ ಕಾವ್ಯಹಸ್ತಪ್ರತಿ ಬೆಂಗಳೂರಿನ ಭಾಗ್ಯವಸು ಅವರ 'ರೆಪ್ಪೆಗಂಬದ ಮೇಲೆ ಕೂತ ಮರಿ ಹಕ್ಕಿ' ಆಯ್ಕೆಯಾಗಿದೆ ಹಾಗೂ ದಿ.ಯಮುನಾಬಾಯಿ ರಾಜಣ್ಣ ಭೋವಿ ಸ್ಮರಣಾರ್ಥ 2023ರ ಸಾಲಿನ ಪುಸ್ತಕ ಪ್ರಶಸ್ತಿಗೆ ದಾವಣಗೆರೆಯ ಮಲ್ಲಿಕಾರ್ಜುನ ಕಡಕೋಳ ಅವರ ಪರಿಮಳದ ಹಾದಿಯ ಪಯಣಿಗರು ಕೃತಿಯು ಆಯ್ಕೆಯಾಗಿದೆ ಎಂದು ಬೆರಗು ಪ್ರಕಾಶನದ ಪ್ರಕಾಶಕಿ ವಿಜಯಲಕ್ಷ್ಮಿ ಆರ್.ಕತ್ತಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಯುವಕವಿಗಳನ್ನು ಪ್ರೋತ್ಸಾಹಿಸುವ ದೃಷ್ಟಿಯಿಂದ ಯುವ ಕಾವ್ಯ ಪುರಸ್ಕಾರ ನೀಡಲು ಇದೇ ವರ್ಷದಿಂದ ನಿರ್ಧರಿಸಿದ್ದು ಕಲಬುರಗಿಯ ಕೇಂದ್ರೀಯ ವಿಶ್ವವಿದ್ಯಾಲಯದ ಸಂಶೋಧನಾ ವಿದ್ಯಾರ್ಥಿ ಪಿ. ನಂದಕುಮಾರ ಅವರ "ಹಂಗಿನ ಕಿರೀಟಕ್ಕೆ ಜೋತು ಬಿದ್ದ ನಾಲಿಗೆ'ಹಸ್ತಪ್ರತಿ ಆಯ್ಕೆಯಾಗಿದೆ.

ಬೆರಗು ಪ್ರಕಾಶನವು ಕಳೆದ ಐದು ವರ್ಷಗಳಿಂದಲೂ ಪ್ರಶಸ್ತಿಗಳನ್ನು ನೀಡುತ್ತಾ ಬಂದಿದ್ದು. ಪ್ರಸಕ್ತ ವರ್ಷದ ಪ್ರಶಸ್ತಿಗೆ 157 ಪುಸ್ತಕಗಳು, ಹಾಗೂ ಹಸ್ತಪ್ರತಿ ಸ್ಪರ್ಧೆಗೆ 74 ಹಸ್ತಪ್ರತಿಗಳು ನಾಡಿನ ವಿವಿಧ ಭಾಗಗಳಿಂದ ಮತ್ತು ಮಹಾರಾಷ್ಟ್ರ, ಕೇರಳ ಹಾಗೂ ಬೇರೆ ಬೇರೆ ರಾಜ್ಯಗಳಿಂದ ಬಂದಿದ್ದವು. ಖ್ಯಾತ ಕವಿ, ಕತೆಗಾರ ವಾಸುದೇವ ನಾಡಿಗ ಹಾಗೂ ಗುಲಬರ್ಗಾ ವಿವಿಯ ಡಾ.ಎಂ.ಬಿ.ಕಟ್ಟಿ ಅವರು ತೀರ್ಪುಗಾರರಾಗಿ ಕಾರ್ಯನಿರ್ವಹಿಸಿದ್ದರು.

ಹಸ್ತಪ್ರತಿ ಪ್ರಶಸ್ತಿಯು ಹತ್ತು ಸಾವಿರ ರೂ. ನಗದು, ಪ್ರಶಸ್ತಿಫಲಕ ಹಾಗೂ ಸ್ಮರಣಿಕೆಯೊಳಗೊಂಡಿದ್ದು ಬೆರಗು ಪ್ರಕಾಶನವು ಹಸ್ತಪ್ರತಿಯನ್ನು ಪ್ರಕಟಿಸುವ ಮೂಲಕ ಗೌರವಿಸಲಿದೆ ಹಾಗೂ ಪುಸ್ತಕ ಪ್ರಶಸ್ತಿಯು ಐದು ಸಾವಿರ ರೂ.ನಗದು, ಪ್ರಶಸ್ತಿಫಲಕ ಹಾಗೂ ಸ್ಮರಣಿಕೆಯೊಳಗೊಂಡಿದ್ದು ಮುಂದಿನ ತಿಂಗಳು ಕಡಣಿಯಲ್ಲಿ ನಡೆಯುವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಬಬಲೇಶ್ವರ ಕ್ಷೇತ್ರದಲ್ಲಿ ಕೈಗಾರಿಕೆ ಉತ್ತೇಜನಕ್ಕೆ ಒತ್ತು :ಎಂಎಲ್ಸಿ ಸುನೀಲಗೌಡ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಬಬಲೇಶ್ವರ ಮತಕ್ಷೇತ್ರದಲ್ಲಿ ನೀರಾವರಿ ಜೊತೆಗೆ ಮೂಲಭೂತ ಸೌಕರ್ಯ, ಶಿಕ್ಷಣ, ಗುಣಮಟ್ಟದ ವಿದ್ಯುತ್ ಪೂರೈಕೆ, ಕೈಗಾರಿಕೆಗೆ ಉತ್ತೇಜನಕ್ಕೆ ಒತ್ತು ನೀಡಲಾಗಿದೆ ಎಂದು ವಿಧಾನಪರಿಷತ್ ಶಾಸಕ ಸುನೀಲಗೌಡ ಪಾಟೀಲ ಹೇಳಿದ್ದಾರೆ.

ಶನಿವಾರ ಹೊನವಾಡ ಗ್ರಾಮದ ಅಲ್ಪಸಂಖ್ಯಾತರ ಕಾಲನಿಗಳಲ್ಲಿ ಕೆ.ಆರ್.ಐ.ಡಿ.ಎಲ್ ವತಿಯಿಂದ ರೂ. 25 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾಗುವ ಸಿಸಿ ರಸ್ತೆ ಕಾಮಗಾ-ರಿಗೆ ಭೂಮಿ ಪೂಜೆ ನೆರವೇರಿಸಿದ ಅವರು, ನಂತರ ತಿಕೋಟಾ ಪಟ್ಟಣ ಪಂಚಾಯಿತಿ ಕಾರ್ಯಾಲಯದ ಬಳಿ ನಡೆದ ಕಾರ್ಯಕ್ರಮದಲ್ಲಿ ಕೆ.ಆರ್.ಐ.ಡಿ.ಎಲ್ ವತಿಯಿಂದ ತಲಾ ರೂ. 50 ಲಕ್ಷ ವೆಚ್ಚದಲ್ಲಿ ಪಟ್ಟಣದ ಅಲ್ಪಸಂಖ್ಯಾತರ ಕಾಲನಿಗಳಲ್ಲಿ ಮತ್ತು ಗೈರಾಣ ಕಾಲನಿಯ ಅಲ್ಪಸಂಖ್ಯಾತರ ಪ್ರದೇಶದಲ್ಲಿ ಸಿಸಿ ರಸ್ತೆ ಕಾಮಗಾರಿ ಹಾಗೂ ಪ. ಪಂ. ವತಿಯಿಂದ ರೂ 112.23 ಲಕ್ಷ ವೆಚ್ಚದ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು.

ತಿಕೋಟಾದಲ್ಲಿ ಮಾತನಾಡಿದ ಅವರು, ಪಟ್ಟಣದಲ್ಲಿ ಸರ್ವಾಂಗೀಣ ಅಭಿವೃದ್ಧಿಗೆ ಬದ್ಧನಾಗಿದ್ದೇನೆ. ವಾರ್ಡವಾರು ಬೇಡಿಕೆಗಳನ್ನು ಕ್ರೋಢಿಕರಿಸಿ ಸಮಗ್ರ ಕ್ರಿಯಾ ಯೋಜನೆ ರೂಪಿಸಿ ವರದಿ ನೀಡಬೇಕು ಎಂದು ಪ.ಪಂ ಅಧಿಕಾರಿಗಳಿಗೆ ಸೂಚನೆ ನೀಡಿದರು. ಅಲ್ಲದೇ, ಜಿಲ್ಲೆಯಲ್ಲಿ ನೀರಾವರಿ ಕ್ರಾಂತಿಯ ಮಾದರಿಯಲ್ಲಿ ಶಿಕ್ಷಣ, ಕೈಗಾರಿಕೆ, ವಿದ್ಯುತ್ ಹಾಗೂ ಮೂಲಭೂತ ಸೌಕರ್ಯ ಕ್ಷೇತ್ರಗಳಲ್ಲಿ ಅಭಿವೃದ್ಧಿಗೆ ವೇಗ ನೀಡಲಾಗುವುದು ಎಂದು ಅವರು ಹೇಳಿದರು.

ಇದಕ್ಕೂಮುನ್ನಹೊನವಾಡಗ್ರಾಮದಅಲ್ಪಸಂಖ್ಯಾತರ ಕಾಲನಿಗಳಲ್ಲಿ ಕೆ.ಆರ್.ಐ.ಡಿ.ಎಲ್ ವತಿಯಿಂದ ರೂ. 25 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾಗುವ ಸಿಸಿ ರಸ್ತೆ ಕಾಮಗಾ-ರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು ಬಬಲೇಶ್ವರ ಮತಕ್ಷೇತ್ರದಲ್ಲಿ ಸಚಿವ ಎಂ. ಬಿ. ಪಾಟೀಲ ಅವರು ನಾನಾ ಕೈಗಾರಿಕೋದ್ಯಮಿಗಳಿಂದ ಸಿ.ಎಸ್.ಆರ್ ಅನುದಾನದಲ್ಲಿ ಸರಕಾರಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಲು ಕ್ರಮ ಕೈಗೊಂಡಿದ್ದಾರೆ. ಈ ಮೂಲಕ ಗ್ರಾಮೀಣ ಭಾಗದಲ್ಲಿ ಕಾನ್ವೆಂಟ್ ಮಾದರಿಯಲ್ಲಿ ಶಿಕ್ಷಣ ಒದಗಿಸುತ್ತಿದ್ದಾರೆ ಎಂದು ಶಾಸಕ ಸುನೀಲಗೌಡ ಪಾಟೀಲ ಹೇಳಿದರು.

ಈ ಎರಡೂ ಕಾರ್ಯಕ್ರಮಗಳಲ್ಲಿ ಶಾಲಾ ಮಕ್ಕಳಿಗೆ ನೋಟ್ ಬುಕ್ ಗಳನ್ನು ವಿತರಿಸಲಾಯಿತು.

ಹೊನವಾಡ ಕಾರ್ಯಕ್ರಮದಲ್ಲಿ ಮುಖಂಡರಾದ ರಾಮಗೊಂಡ ಚಾವರ, ಸಿದ್ದು ಬೆಳಗಾವಿ, ವಿಜಯಕುಮಾರ ಹಿರೇಮಠ, ಅಕ್ಬರ ತಿಕೋಟಿ, ಸಾಬು ಖಂಡೇಕಾರ, ದುಂಡಪ್ಪ ವಾಲಿಕಾರ, ಶ್ರೀಕಾಂತ ಕುಂಬಾರ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಶಾಂತ ಪೂಜಾರಿ, ಪಿಡಿಓ ಶೋಭಾ ಸಿಳೀನ, ತಿಕೋಟಾ ಪಟ್ಟಣದ ಕಾರ್ಯಕ್ರಮದಲ್ಲಿ ಮುಖಂಡರಾದ ವಿಜುಗೌಡ ಪಾಟೀಲ, ಆರ್. ಬಿ. ದೇಸಾಯಿ, ಭೀಮು ಹಂಗರಗಿ, ಸಂತೋಷ ಕೋಲಾರ, ಮಲ್ಲಿಕಾರ್ಜುನ ಹಂಜಗಿ, ಬಸಯ್ಯಾ ವಿಭೂತಿಮಠ, ಭಾಗೀರಥಿ ತೇಲಿ, ಮಮ್ಮು ಮುಜಾವರ, ಲೇಪು ಕೊಣ್ಣೂರ, ಹಾಜಿಬಾ ಕೊಟ್ಟಲಗಿ, ರಾಜಕುಮಾರ ಸುಣಗಾರ, ಪಂ. ಪಂ. ಅಧಿಕಾರಿ ರಾಘವೇಂದ್ರ ನಡುವಿನಮನಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಶಾಂತ ಪೂಜಾರಿ, ಗ್ರಾಮಸ್ಥರು ಉಪಸ್ಥಿತರಿದ್ದರು.

# ವಿಮಾನ ನಿಲ್ದಾಣಕ್ಕೆ ಬಸವೇಶ್ವರರ ಹೆಸರು ನಾಮಕರಣಕ್ಕೆ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ವಿಮಾನ ನಿಲ್ದಾಣಕ್ಕೆ ಜಗಜ್ಯೋತಿ ಬಸವೇಶ್ವರರ ಹೆಸರನ್ನು ನಾಮಕರಣ ಮಾಡುವುದರ ಜೊತೆಗೆ ನಡೆದಾಡುವ ದೇವರು ಸಿದ್ದೇಶ್ವರ ಅಪ್ಪನವರ ಹೆಸರನ್ನು ವಿಜಯಪುರ ರೇಲ್ವೆ ನಿಲ್ದಾಣಕ್ಕೆಮರು ನಾಮಕರಣ ಮಾಡಬೇಕು ಎಂದು ಜಿಲ್ಲಾ ಜೈಕರ್ನಾಟಕ ಸಂಘಟನೆ ಅಧ್ಯಕ್ಷ ಸಂಗಮೇಶ ದಾಶ್ಯಾಳಗೌಡ, ಹೋರಾಟ ಸಮಿತಿ ಅಧ್ಯಕ್ಷ ಸಿದ್ದರಾಜ ಹೊಳಿ ಆಗ್ರಹಿಸಿದರು.


ಶನಿವಾರ ನಗರದ ಖಾಸಗಿ ಹೋಟೇಲನಲ್ಲಿ ಜಂಟಿ ಪತ್ರಿಕಾ ಗೋಷ್ಠಿಯಲ್ಲಿ ಅವರು ಮಾತನಾಡುತ್ತ, ಈ ನಿಟ್ಟಿನಲ್ಲಿ ಕೇಂದ್ರ ಸರಕಾರಕ್ಕೆ ಸಂಸದ ರಮೇಶ ಜಿಗಜಿಣಗಿ ಅವರು ಪ್ರಧಾನ ಮಂತ್ರಿ ಹಾಗೂ ಸಂಬಂಧಪಟ್ಟ ಕೇಂದ್ರ ಸಚಿವರೊಂದಿಗೆ ಚರ್ಚಿಸಿ ನಮ್ಮ ಜಿಲ್ಲೆಯ ಜನರ ಭಾವನೆಗಳೊಂದಿಗೆ ಸ್ಪಂದಿಸಬೇಕು ಎಂದರು.

ಜೊತೆಗೆ ವಿಜಯಪುರದ ಮಹಾತ್ಮಾ ಗಾಂಧಿ ವೃತ್ತವನ್ನು ನವೀಕರಣಗೊಳಿಸಿ ಕಂಚಿನ ಮೂರ್ತಿಯನ್ನು ಪ್ರತಿಷ್ಠಾಪಿಸಿದ್ದಲ್ಲಿ ನಗರಕ್ಕೆ ಸೌಂದರ್ಯ ಬರುವದರ ಜೊತೆಗೆ ರಾಷ್ಟ್ರಪಿತರಿಗೆ ಗೌರವ ಸಲ್ಲಿಸಿದಂತಾಗುತ್ತದೆ. ಹಾಗೂ ನಗರ ಕಿತ್ತೂರ ಚೆನ್ನಮ್ಮ ರಂಗಮಂದಿರವನ್ನು ಮಹಾನಗರ ಪಾಲಿಕೆ ಸುಪರ್ಧಿಗೆ ಪಡೆದು ನವೀಕರಣಗೊಳಿಸಿ ರಂಗಭೂಮಿ ಕಲಾವಿದರಿಗೆ ದಿನನಿತ್ಯ ನಾಟಕ ಪ್ರದರ್ಶನಕ್ಕೆ ಅವಕಾಶ ಮಾಡಿಕೊಡಬೇಕು. ಜಿಲ್ಲೆಯ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ, ಸಚಿವ ಶಿವಾನಂದ ಪಾಟೀಲ ಹಾಗೂ ನಗರ ಶಾಸಕ ಬಸನಗೌಡ ಪಾಟೀಲ (ಯತ್ನಾಳ) ರವರು ಈ ಎಲ್ಲ ಬೇಡಿಕೆಗಳಿಗೆ ಸ್ಪಂದಿಸಬೇಕೆಂದು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಮಹಿಳಾ ಅಧ್ಯಕ್ಷೆ ಮೀನಾ ಎಂ ,ಕುಂದನಗಾರ, ಗಾಯತ್ರಿ ರೆಡ್ಡಕರ, ಕಾರ್ಯಾಧ್ಯಕ್ಷ ಪಿಂಟು ಗೊಬ್ಬುರ, ಉಪಾಧ್ಯಕ್ಷ ರಿಯಾಜ ಪಾಂಡು, ಪ್ರಧಾನ ಕಾರ್ಯದರ್ಶಿ ಮುಕದಸ್ಸ ಇನಾಮದಾರ, ಆನಂದ ಹುನ್ನೂರ, ಮುಖಂಡ ಅಶೋಕ ಕೊಡಗ ಉಪಸ್ಥಿತಿರಿದ್ದರು.

**ಪ್ರತಿಭಟನೆ ಮಾರ್ಗ**

ದಿ.ಅ.21 ರಂದು ಬೆಳಿಗ್ಗೆ 10:00 ಗೆ ಸಿದ್ದೇಶ್ವರ ಗುಡಿಯಿಂದ ಪ್ರಾರಂಭವಾಗಿ ಗಾಂಧಿ ವೃತ್ತದಲ್ಲಿ ಬೇಡಿಕೆ ಕು-ರಿತು ಮಾತನಾಡಿದ ನಂತರ ಪ್ರಮುಖ ರಸ್ತೆ ಬಸವೇಶ್ವರ ವೃತ್ತ ಅಂಬೇಡ್ಕರ , ವೃತ್ತ ಮುಖಾಂತರ ಜಿಲ್ಲಾಧಿಕಾ-ರಿಗಳ ಆವರಣದಲ್ಲಿ ಧರಣಿ ಪ್ರಾರಂಭ. ಬೆಳಿಗ್ಗೆ 10:00 ಗಂಟೆಯಿಂದ ಸಂಜೆ 5:00 ಗಂಟೆವರೆಗೆ (ಸರಕಾರಿ ರಜೆ ಹೊರತುಪಡಿಸಿ).



### ಬೆಂಬಲಕ್ಕೆ ಮನವಿ

ವಿಜಯಪುರ ಜಿಲ್ಲೆಯ ನಾಗರೀಕರು, ಸಂಘ , ಸಂಸ್ಥೆಯ ಪದಾಧಿಕಾರಿಗಳು , ರಾಜಕೀಯ ಮುಖಂಡರು , ಕನ್ನಡ ಪರ ಹೋರಾಟಗಾರರು , ಸಾಹಿತಿಗಳು , ಮಹಿಳಾ ಸಂಘಟನೆಯ ತಾಯಂದಿರು , ತರುಣರು ಈ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿ ಹೋರಾಟಕ್ಕೆ ಶಕ್ತಿ ತುಂಬಬೇಕೆಂದು ಜೈ ಕರ್ನಾಟಕ ಸಂಘಟನೆಯ ಸಂಗಮೇಶ ದಾಶ್ಯಾಳಗೌಡ ಹಾಗೂ ಸಿದ್ದರಾಜ ಹೊಳಿ ಜಂಟಿಯಾಗಿ ವಿನಂತಿಸಿದರು.

# ಬಿಜೆಪಿ ಶಾಸಕ ಯತ್ನಾಳ್ ವಿರುದ್ಧ ಪ್ರಕರಣ ದಾಖಲು

■ ಉದಯರಶ್ಮಿ ದಿನಪತ್ರಿಕೆ



**ರಾಹುಲ್ ಗಾಂಧಿ ವಿರುದ್ಧ ಅವಾಚ್ಯ ಶಬ್ದ ಬಳಕೆ। ಕಾಂಗ್ರೆಸ್ ನಗರಸಭಾ ಸದಸ್ಯ ಪರಶುರಾಮ ಹೊಸಮನಿ ದೂರು**

ವಿಜಯಪುರ: ಇತ್ತೀಚೆಗೆ ನಡೆದ ಸಾರ್ವಜನಿಕ ಸಭೆಯಲ್ಲಿ ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಅವರನ್ನು ನಿಂದಿಸಿದ ಆರೋಪದ ಮೇಲೆ ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ಶನಿವಾರ ತಿಳಿಸಿದ್ದಾರೆ.

ಕಾಂಗ್ರೆಸ್ ನಗರಸಭಾ ಸದಸ್ಯ ಪರಶುರಾಮ ಹೊಸಮನಿ ಅವರ ದೂರಿನ ಮೇರೆಗೆ ಶುಕ್ರವಾರ ಪ್ರಕರಣ ದಾಖಲಾಗಿದೆ. ಅಕ್ಟೋಬರ್ 15 ರಂದು ನಡೆದ ಕಾರ್ಯಕ್ರಮವೊಂದರಲ್ಲಿ ಯತ್ನಾಳ್ ಅವರು ರಾಹುಲ್ ಗಾಂಧಿ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ ಎಂದು ಹೊಸಮನಿ ತಮ್ಮ ದೂರಿನಲ್ಲಿ ಆರೋಪಿಸಿದ್ದಾರೆ.

ಅವರ ದೂರಿನ ಆಧಾರದ ಮೇಲೆ, ಯತ್ನಾಳ್ ವಿರುದ್ಧ ಗಾಂಧಿ ಚೌಕ್ ಪೊಲೀಸ್ ಠಾಣೆಯಲ್ಲಿ ಶಾಂತಿ ಕದಡುವ ಉದ್ದೇಶಪೂರ್ವಕ ಅವಮಾನ ಮತ್ತು ಸುಳ್ಳು ಮತ್ತು ತಪ್ಪು ಮಾಹಿತಿ ಹರಡಿದ ಪ್ರಕರಣವನ್ನು ದಾಖಲಿಸಲಾಗಿದೆ. ಶಾಂತಿ ಸೌಹಾರ್ದವನ್ನು ಕೆಡಿಸುವ ದುರುದ್ದೇಶದಿಂದ ಸಾರ್ವಜನಿಕವಾಗಿ ಇತರೆ ಧರ್ಮದವರನ್ನು ಹೀಯಾಳಿಸಿ, ಮಹಿಳೆಯರ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿ ಎಲ್ಲ-ರಿಗೂ ಮಾನಸಿಕ ನೋವನ್ನುಂಟು ಮಾಡಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ.

## ಕಿತ್ತೂರ ರಾಣಿ ಚೆನ್ನಮ್ಮ ಜಯಂತಿ ಪೂರ್ವಭಾವಿ ಸಭೆಯಲ್ಲಿ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಸೂಚನೆ

# ರಾಣಿ ಚೆನ್ನಮ್ಮ ಜಯಂತಿ ಅರ್ಥಪೂರ್ಣ ಆಚರಣೆಗೆ ಸಿದ್ಧತೆ ಮಾಡಿಕೊಳ್ಳಿ: ಶಿವಾನಂದ

**ರಾಯಚೂರು:** ಜಿಲ್ಲಾಡಳಿತದ ವತಿಯಿಂದ ಜಿಲ್ಲಾ ಮಟ್ಟದಲ್ಲಿ ಇದೇ ಅ.23ರಂದು ಕಿತ್ತೂರ ರಾಣಿ ಚೆನ್ನಮ್ಮ ಜಯಂತಿ ಕಾರ್ಯಕ್ರಮವನ್ನು ಅರ್ಥಪೂರ್ಣ ಆಚರಣೆಗೆ ಸಿದ್ಧತೆ ಮಾಡಿಕೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಅವರು ಅ.18ರ ಶುಕ್ರವಾರ ದಂದು ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಕಿತ್ತೂರ ರಾಣಿ ಚೆನ್ನಮ್ಮ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.




ಅಂದು ಬೆಳಿಗ್ಗೆ 9ಗಂಟೆಗೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಮೆರವಣಿಗೆ ಹಾಗೂ 11.30ಕ್ಕೆ ರಂಗಮಂದಿರದಲ್ಲಿ ಕಿತ್ತೂರ ರಾಣಿ ಚೆನ್ನಮ್ಮ ಜಯಂತಿಯ ವೇದಿಕೆ ಕಾರ್ಯಕ್ರಮದ ಆಚರಣೆಗೆ ಸಮಾಜದ ಮುಖಂಡರೊಂದಿಗೆ ಚರ್ಚಿಸಿ ನಿರ್ಧರಿಸಲಾಯಿತು. ಕಾರ್ಯಕ್ರಮದಲ್ಲಿ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ, ವಿಶೇಷ ಉಪನ್ಯಾಸ ಕಾರ್ಯಕ್ರಮ, ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲು ನಿರ್ಣಯಿಸಲಾಯಿತು.

ಕಾರ್ಯಕ್ರಮಕ್ಕೆ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಸೂಚಿಸಿದರು. ಎಲ್ಲಾ ಜಿಲ್ಲಾ ಮತ್ತು ತಾಲೂಕು ಸರಕಾರಿ, ಅರೆ ಸರಕಾರಿ, ಕಚೇರಿಗಳಲ್ಲಿ ಹಾಗೂ ಸರಕಾರಿ ಶಾಲಾ ಕಾಲೇಜುಗಳಲ್ಲಿ ಹಾಗೂ ಅನುದಾನ ಶಾಲಾ ಕಾಲೇಜುಗಳಲ್ಲಿ ಬೆಳಿಗ್ಗೆ 9ಗಂಟೆಗೆ ಕಡ್ಡಾಯವಾಗಿ ಜಯಂತಿಯನ್ನು ಆಚರಿಸಲು ಸೂಚಿಸಿದರು.

ಭಾವಚಿತ್ರಕ್ಕೆ ಮಾಲಾರ್ಪಣೆಗೆ ಹೂಗಳಿಂದಆಲಂಕರಿಸಲುಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು. ಕುಡಿಯುವ ನೀರು,

ಸ್ವಚ್ಛತೆಯನ್ನು ಮಾಡುವಂತೆ ನಗರಸಭೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ದತ್ತಪ್ಪ ಸಾಗೂರು, ಸಾರ್ವಜನಿಕ ಶಿಕ್ಷಣ ಇಲಾಖೆಯ ರಂಗಸ್ವಾಮಿ, ನಗರಸಭೆಯ ವ್ಯವಸ್ಥಾಪಕರಾದ ರಾಜು, ಸಮಾಜದ ಮುಖಂಡರಾದ ದಾನಮ್ಮ, ಕನ್ನಡ ಸಾಹಿತ್ಯಪರಿಷತ್‌ಜಿಲ್ಲಾಸಹಕಾರ್ಯದರ್ಶಿ ಡಾ.ದಂಡಪ್ಪ ಬಿರಾದಾರ್ ಸೇರಿದಂತೆ ಇತರರು ಇದ್ದರು.

# ದೀಪಾವಳಿಯನ್ನು ಪರಿಸರ ಸ್ನೇಹಿಯಾಗಿ ಆಚರಿಸೋಣ: ಜಿಲ್ಲಾಧಿಕಾರಿ ನಿತೀಶ್ ಕೆ.

**ರಾಯಚೂರು:** ಪ್ರತಿ ವರ್ಷದಂತೆ ಈ ವರ್ಷವು ದೀಪಾವಳಿಯನ್ನು ಜಿಲ್ಲಾದ್ಯಂತ ಸಡಗರದಿಂದ ಆಚರಿಸಲಾಗುತ್ತಿದ್ದು, ಹಬ್ಬದ ಸಂದರ್ಭದಲ್ಲಿ ಆದ್ದರಿಂದ ದೀಪಾವಳಿ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಸರಳ ರೀತಿಯಲ್ಲಿ ಮಾಲಿನ್ಯ ರಹಿತವಾಗಿ ಮತ್ತು ಭಕ್ತಿ ಪೂರ್ವಕವಾಗಿ ಆಚರಿಸಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಅವರು ತಿಳಿಸಿದ್ದಾರೆ.

ಸಿಡಿಸುವ ಪಟಾಕಿಗಳು ಶಬ್ದ ಮಾಲಿನ್ಯ ಮತ್ತು ವಾಯು ಮಾಲಿನ್ಯವನ್ನು ಉಂಟು ಮಾಡಿ ಪರಿಸರಕ್ಕೆ ಹಾನಿ ಮಾಡುತ್ತಿದೆ ಹಾಗೂ ಜನರ ಆರೋಗ್ಯವನ್ನು ಹದಗೆಡಿಸುತ್ತಿದೆ ಮತ್ತು ಪ್ರಾಣಿ–ಪಕ್ಷಿಗಳ ಕಲರವಕ್ಕೆ ಘಾಸಿ ಉಂಟುಮಾಡುತ್ತಿದೆ. ಆದ್ದರಿಂದ ದೀಪಾವಳಿ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಸರಳ ರೀತಿಯಲ್ಲಿ ಮಾಲಿನ್ಯ ರಹಿತವಾಗಿ ಮತ್ತು ಭಕ್ತಿ ಪೂರ್ವಕವಾಗಿ ಆಚರಿಸಬೇಕಾಗಿರುತ್ತದೆ.

ಈ ಹಿನ್ನಲೆಯಲ್ಲಿ ದೀಪಾವಳಿ ಹಬ್ಬವನ್ನು ಆಚರಿಸುವ ಸಂಬಂಧ ಮಾನ್ಯ ಸರ್ವೋಚ್ಛ ನ್ಯಾಯಾಲಯವು ದಿನಾಂಕ: 23.10.2018 ಮತ್ತು ದಿನಾಂಕ: 31.10.2018 ಹಾಗೂ ತದನಂತರ ರಿಟ್ ಪೆಟಿಶನ್ ಸಂಖ್ಯೆ: 728/2015ರಲ್ಲಿ ನೀಡಿರುವ ನಿರ್ದೇಶನಗಳಂತೆ ಮತ್ತು ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ:ಆರ್‌ಡಿ 465 ಟಿಎನ್‌ಆರ್ 2020, ದಿನಾಂಕ: 12.11.2020 ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸುತ್ತೋಲೆ ದಿನಾಂಕ: 05.03.2024 ರಂತೆ ಪಟಾಕಿ ಬಳಕೆ ಕುರಿತಂತೆ ಹಸಿರು ಪಟಾಕಿಗಳನ್ನು ಹೊರತುಪಡಿಸಿ, ಬೇರೆ ಯಾವುದೇ ಪಟಾಕಿಗಳ ಮಾರಾಟ ಮತ್ತು ಬಳಕೆಯನ್ನು ನಿಷೇಧಿಸಲಾಗಿದೆ.



ಹಸಿರು ಪಟಾಕಿ ಗುರುತಿಸುವಿಕೆ: ಪಟಾಕಿ ಬಾಕ್ಸ್‌ಗಳ ಮೇಲೆ ಕೌನ್ಸಿಲ್ ಆಫ್ ಸೈಂಟಿಫಿಕ್ ಅಂಡ್ ಇಂಡಸ್ಟ್ರಿಯಲ್ ರಿಸರ್ಚ್ (ಅಖಖಖ) ಮತ್ತು ನ್ಯಾಷನಲ್ ಎನ್ವಿರಾಂಮೆಂಟಲ್ ಇಂಜಿನಿಯರಿಂಗ್ ರಿಸರ್ಚ್ ಇನ್ಸಿಟಿಟ್ಯೂಟ್ (ಓಇಇಖಖ) ಇವರ ಲೋಗೋ ಹಾಗೂ ನೊಂದಿತ ಸಂಖ್ಯೆಯೊಂದಿಗೆ ಮುದ್ರಿತವಾಗಿರಬೇಕು. ಹಸಿರು ಪಟಾಕಿ ಮಾರಾಟಗಾರರ ಪಟ್ಟಿಯನ್ನು ಜಾಲತಾಣ: greencracker. csir@neeri.res.in ರಲ್ಲಿ ಪ್ರಕಟಿಸಲಾಗಿದೆ.

ಅಧೀಕೃತ ಮಾರಾಟಗಾರರು ಸಂಬಂಧಪಟ್ಟ ಇಲಾಖೆ/ಪ್ರಾಧಿಕಾರದಿಂದ ನೀಡುವ ಪರವಾನಿಗೆಯಲ್ಲಿ ನಿಗಧಿಪಡಿಸಿರುವ ದಿನಾಂಕ ಮತ್ತು ಸ್ಥಳಗಳಲ್ಲಿ ಮಾತ್ರ ತಾತ್ಕಾಲಿಕ ಪಟಾಕಿ ಅಂಗಡಿಗಳನ್ನು ತೆರೆಯಬೇಕು. ನಿಷೇಧಿತ ಪಟಾಕಿಗಳ ಮಾರಾಟ ಕಂಡುಬಂದಲ್ಲಿ ಅಂತಹ ಪಟಾಕಿಗಳನ್ನು ವಶಪಡಿಸಿಕೊಳ್ಳಲಾಗುವುದು ಮತ್ತು ನಿಯಮಗಳನ್ವಯ ಕಾನೂನು ಕ್ರಮಕೈಗೊಳ್ಳಲಾಗುವುದು.

ಹಬ್ಬದ ಸಮಯದಲ್ಲಿ ರಾತ್ರಿ 08.00 ಗಂಟೆಯಿಂದ 10.00ವರೆಗೆ ಮಾತ್ರ ಪಟಾಕಿಗಳನ್ನು ಸ್ಫೋಟಿಸಲು ಅವಕಾಶ ನೀಡಿದ್ದು, ಉಳಿದ ಸಮಯದಲ್ಲಿ ಪಟಾಕಿಗಳ ಸ್ಫೋಟವನ್ನು ನಿಷೇಧಿಸಲಾಗಿದೆ. ರಾತ್ರಿ 10.00ಗಂಟೆಯಿಂದ ಬೆಳಿಗ್ಗೆ 06.00ಗಂಟೆವರೆಗೆ ಪಟಾಕಿಗಳ ಸ್ಫೋಟವನ್ನು ನಿಷೇಧಿಸಲಾಗಿದೆ.

125ಡೆಸಿಬಲ್‌ಗಳಿಗಿಂತಲೂ ಹೆಚ್ಚಿನ ಶಬ್ದ ಮಾಡುವ ಪಟಾಕಿಗಳನ್ನು ಹಾಗೂ ಸರಪಟಾಕಿಗಳ ಬಳಕೆಯನ್ನು ಸಹ ನಿಷೇಧಿಸಲಾಗಿದೆ. ಶಿಕ್ಷಣ ಸಂಸ್ಥೆಗಳು, ಆಸ್ಪತ್ರೆ, ವೃದ್ಧಾಶ್ರಮ ಸುತ್ತಮುತ್ತಲೂ ಹಾಗೂ ಇನ್ನಾವುದೇ ನಿಷೇಧಿತ ಪ್ರದೇಶದಲ್ಲಿ ಯಾವುದೇ ರೀತಿಯ ಪಟಾಕಿಗಳನ್ನು ಸ್ಫೋಟಿಸುವಂತಿಲ್ಲ. ಸಾಧ್ಯವಾದಷ್ಟು ಹಣತೆ ದೀಪ ಹಚ್ಚುವ ಮೂಲಕ ಬೆಳಕಿನ ಹಬ್ಬ ದೀಪಾವಳಿಯನ್ನು ಪರಿಸರ ಸ್ನೇಹಿಯಾಗಿ ಆಚರಿಸೋಣ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಗತ್ತು ಕಂಡ ಕವಿ ಮಹರ್ಷಿ ವಾಲ್ಮೀಕಿ

**ಸತ್ಯಕಾಮ ವಾರ್ತೆ ಯಾದಗಿರಿ:** ಹಿಂದೂ ಧರ್ಮದ ಪ್ರಮುಖ ಗ್ರಂಥಗಳಲ್ಲಿ ಒಂದಾದ ರಾಮಾಯಣ ಹಿಂದೂ ಮಹಾ ಕಾವ್ಯವನ್ನು ರಚಿಸಿದ ಮಹರ್ಷಿ ವಾಲ್ಮೀಕಿ ಅವರು ದೇಶದ ಅಪರೂಪದ ಮಹಾ ಕವಿ ಎಂದೆನಿಸಿದ್ದಾರೆ ಎಂದು ಜೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರರಾದ ಡಿ.ರಾಘವೇಂದ್ರ ಅವರು ಹೇಳಿದರು.

ನಗರದ ಜೆಸ್ಕಾಂ ಇಲಾಖೆಯಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ಹಾಗೂ ಜೆಸ್ಕಾಂ ನೌಕರರ ಸಂಘ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಕಲ್ಯಾಣ ಸಂಸ್ಥೆ ವತಿಯಿಂದ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಮಹರ್ಷಿ ವಾಲ್ಮೀಕಿ ಅವರು ದೇಶ ಕಂಡ ಶ್ರೇಷ್ಠ ಕವಿಗಳಲ್ಲಿ ಒಬ್ಬರು ಇಂದಿನ ಕವಿಗಳಿಗೆ, ಸಾಹಿತಿಗಳಿಗೆ, ವಾಲ್ಮೀಕಿ ಅವರು ಸ್ಫೂರ್ತಿಯಾಗಿದ್ದಾರೆ.

ಗ್ರಂಥಗಳಲ್ಲಿ ಅತ್ಯಂತ ಪುರಾತನ ಗ್ರಂಥ ಶ್ರೀ ರಾಮಾಯಣ ದರ್ಶನಂ ಮಹಾಕಾವ್ಯವಾಗಿದೆ. ರಾಮಾಯಣವು ಭಾರತೀಯರ ಜೀವ ಚರಿತ್ರೆಯನ್ನು ಮತ್ತು ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಮಹಾ ಕಾವ್ಯವಾಗಿದ್ದು, ರಾಮಾಯಣ ಮಹಾ ಗ್ರಂಥದ ಕರ್ತೃಕಾರರು ಮಹಾ ತಪಸ್ವಿ ಶ್ರೀ ಮಹರ್ಷಿ ವಾಲ್ಮೀಕಿ ಎಂಬ ಹೆಗ್ಗಳಿಕೆ ಮಹರ್ಷಿ ವಾಲ್ಮೀಕಿ ಅವರ ಜ್ಞಾನ ಭಂಡಾರವನ್ನು ಅವರ ತತ್ವಗಳು, ಆದರ್ಶಗಳು,ಜೀವನದ ಮಾರ್ಗದಲ್ಲಿ ನಾವು ನಿವೆಲ್ಲರು ಅನುಸರಿಸಿ ನಡೆಯಬೇಕಾಗಿದೆ, ಶ್ರೇಷ್ಠ ಕವಿ ಅವರ ಕೊಡುಗೆಗಳನ್ನು ಹಾಗೂ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು, ಮಹರ್ಷಿಗಳ ಬದುಕು ಹಾಗೂ ಬರಹಗಳನ್ನು, ತತ್ವಗಳನ್ನು ಸ್ವೀಕರಿಸುವುದು ನಮ್ಮ ಆದ್ಯ ಕರ್ತವ್ಯವಾಗಿದೆ ಎಂದರು.



ಈ ಸಂದರ್ಭದಲ್ಲಿ ಕಾರ್ಯ ನಿರ್ವಾಹಕ ಅಭಿಯಂತರ ಶಂಕರ್ ಗುತ್ತಿ, ಸ್ಥಳೀಯ ಸಮಿತಿ ಅಧ್ಯಕ್ಷ ಯಮುನಪ್ಪ ತನಿಖೆದಾರ, ಸಂಘಟನಾ ಕಾರ್ಯದರ್ಶಿ ಹಣಮಂತರಡ್ಡಿ ,

ಎಸ್ ಸಿ, ಎಸ್ ಟಿ , ನೌಕರರ ಕಾರ್ಯದರ್ಶಿ ಚಂದಪ್ಪ, ಎಸ್ ಸಿ, ಎಸ್ ಟಿ , ಲೆಕ್ಕಾಧಿಕಾರಿಗಳಾದ ಅಶೋಕ್, ಬಸವರಾಜ, ಸದಸ್ಯರುಗಳಾದ ಅಶೋಕ್ ಕಾವಲಿ, ತಿಪ್ಪಣ್ಣ, ಮಲ್ಲಿಕಾರ್ಜುನ, ಸೈಯದ್ ಹಸನ್ , ಸಂತೋಷ್ ಯಾದವ್, ಪ್ರಕಾಶ್ ರಾಠೋಡ್, ತಿರುಪತಿ ದೊರೆ, ನಾಗರಾಜ ನಾಯಕ್,ಅಯ್ಯಪ್ಪ ಸುಂಗೂಲಕರ್, ಬಸವರಾಜ ಕುರಕುಂಬಳ, ಸುರೇಖಾ ಕಟ್ಟಿಮನಿ, ಶ್ವೇತಾ ಇದ್ದರು. ಜೆ ಇ, ಈರಪ್ಪ ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು.

# ವಿದ್ಯುತ್ ಕಂಬ ದುರಸ್ಥಿಗೆ ನಮ್ಮ ಕರ್ನಾಟಕ ಸೇನೆ ಆಗ್ರಹ

ಯಾದಗಿರಿ ತಾಲ್ಲೂಕಿನ ಹೆಡಗಿಮದ್ರಾ ಗ್ರಾಮದಲ್ಲಿ ವಿದ್ಯುತ್ ಸರಬರಾಜು ಕೊರತೆ ಮತ್ತುಕಂಬಗಳುದುರಸ್ತಿಗೊಳಿಸಬೇಕೆಂದು ನಮ್ಮ ಕರ್ನಾಟಕ ಸೇನೆ ಯಾದಗಿರಿ ತಾಲ್ಲೂಕ ಘಟಕ ಅಧ್ಯಕ್ಷ ಬಾಬು ಹೆಡಗಿಮದ್ರಾ ಕಾರ್ಯನಿರ್ವಾಹ ಅಭಿಯಂತರರು ವಿದ್ಯುತ್ ಸರಭರಾಜು ಯಾದಗಿರಿ ಇವರಿಗೆ ಮನವಿ ಪತ್ರದ ಮೂಲಕ ಆಗ್ರಹಿಸಿದ್ದಾರೆ.

ಹೆಡಗಿಮದ್ರಾ ಗ್ರಾಮದಲ್ಲಿ ಸುಮಾರು 3–4 ದಿನಗಳಿಂದ ವಿದ್ಯುತ್ ಕೊರತೆಯಿಂದ ಗ್ರಾಮಸ್ಥರು ಪರದಾಡುತತಿದ್ದಾರೆ ಕೂಡಲೇ ಈ ಕೊರತೆಯನ್ನು ನೀಗಿಸಬೇಕು ಮತ್ತು ಗ್ರಾಮದಲ್ಲಿ ಅನೇಕ ಕಡೆ ವಿದ್ಯುತ್ ಕಂಬಗಳು ಬಾಗಿ ಕೆಳಗೆ ಬೀಳುವ ಪರಸ್ಥಿಯಲ್ಲಿದ್ದು



ಹಾಗೂ ವಿದ್ಯುತ್ ತಂತಿ ಜನರ ಕೈಗೆ ತಾಗುವಂತಿದೆ ಇದರಿಂದ ಸಾರ್ವಜನಿಕರಿಗೆ ಜೀವದ ಭಯವಾಗಿದೆ ಈ ಕಾರಣದಿಂದ ಕೂಡಲೇ ಈ ತೊಂದರೆಯನ್ನು ಬಗೆಹರಿಸಬೇಕು


ಇಲ್ಲವಾದಲ್ಲಿ ಮುಂದಾಗುವ ಅನಾಹುತಗಳಿಗೆ ತಾವೇ ಜವಾಬ್ದಾರಿಯಾಗುತ್ತಿರೆಂದು ತಿಳಿಸುತ್ತ ಮತ್ತು ಇನ್ನು ಒಂದು ವಾರದಲ್ಲಿ ಈ ವಿದ್ಯುತ್ ಕಂಬಗಳ ದುರಸ್ಥಿಯಾಗದಿದ್ದಲ್ಲಿ ನಮ್ಮ ಸಂಘಟನೆಯಿಂದ ತಮ್ಮ ಕಚೇರಿ ಮುಂದೆ ಉಗ್ರವಾದ ಹೋರಾಟವನ್ನು ಮಾಡತ್ತೇವೆಂದು ಮನವಿ ಪತ್ರದ ಮೂಲಕ ಎಚ್ಚರಿಸಿದ್ದಾರೆ.

ಈ ಸಂದಂರ್ಭದಲ್ಲಿ ಜನಾರ್ಧನ (ಜೆಕೆ) ಅಮ್ಮಣ್ಣ ವಿಶ್ವಕರ್ಮ,ರಮೇಶ ಬಡಿಗೇರ ತುಮಕೂರು ಇದ್ದರು.

# ವಿವಿಧ ಕಡೆಗಳಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ

**ಸುರಪುರ:** ನರೇಶಕುಮಾರ ಸೇವಾ ಸಂಸ್ಥೆ ಸುರಪುರ ವತಿಯಿಂದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ನಗರದ ಬಯಲು ಆಂಜನೇಯ ದೇವಸ್ಥಾನ ಹಾಗೂ ರಂಗಂಪೇಟೆಯ ಬನಶಂಕರಿ ದೇವಸ್ಥಾನದ ಆವರಣದಲ್ಲಿ ಸಸಿಗಳನ್ನು ನೆಡುವ ಮೂಲಕ ವಿಶೇಷವಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಲಿಂಗಯ್ಯ ಹಿರೇಮಠ ಅರ್ಚಕರು,ಸಂಸ್ಥೆಯ ಅಧ್ಯಕ್ಷ ನಾಗರಾಜ ನಾಯಕ,ಸಾಮಾಜಿಕ ಕಾರ್ಯಕರ್ತ ಹಾಗೂ ಸಂಸ್ಥೆಯ ಕಾರ್ಯದರ್ಶಿ ಸಚಿನಕುಮಾರ ನಾಯಕ,ಚಂದ್ರು ಪ್ರಧಾನಿ, ಸಚಿನ ಹಳ್ಳದಮನಿ,ಮುರಳಿಧರ,ನಿಂಗೂ ಐಕೂರ ಸೇರಿದಂತೆ ಅನೇಕರಿದ್ದರು.



**ಬಿಜಾಸಪುರ ಗ್ರಾಮ :** ತಾಲ್ಲೂಕಿನ ಬಿಜಾಸಪುರ ಗ್ರಾಮದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸಲಾಗಿದೆ.ಶ್ರೀ ಮಹರ್ಷಿ ವಾಲ್ಮೀಕಿ ನಾಮಫಲಕಕ್ಕೆ ಪೂಜೆ ಸಲ್ಲಿಸಿ ಮಾಲಾರ್ಪಣೆ ಮಾಡಿ ಸಿಹಿ ಹಂಚಿ ಘೋಷಣೆಗಳ ಕೂಗಿ ಆಚರಿಸಿದರು.ಈ ಸಂದರ್ಭದಲ್ಲಿ ಶಿಕ್ಷಕ ವೆಂಕಟೇಶ ನಾಯಕ ಆಲಮೇಲ ಮಹರ್ಷಿ ವಾಲ್ಮೀಕಿ ಜಯಂತಿ ಕುರಿತು ಮಾತನಾಡಿದರು.ಮುಖಂಡರಾದ ನಿಂಗಪ್ಪ ನಾಯಕ,ಹಣಮಂತ ನಾಯಕ,ವೆಂಕಟೇಶ ನಾಯಕ,ಮಲ್ಲಪ್ಪ ಶ್ರೀನಿವಾಸಪುರ,ಮಲ್ಕಪ್ಪ ಬಳ್ಳಾಗಿ,ವಾಲ್ಮೀಕಿ ಸಂಘದ ಅಧ್ಯಕ್ಷ ಮಲ್ಕಪ್ಪ ನಾಯಕ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ನೇರ ಸಂದರ್ಶನಕ್ಕೆ ಆಹ್ವಾನ

**ಯಾದಗಿರಿ:** 2024ರ ಅಕ್ಟೋಬರ್ 21ರ ಸೋಮವಾರ ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 3 ಗಂಟೆಯ ವರೆಗೆ ನೇರ ಸಂದರ್ಶನಕ್ಕೆ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ಉದ್ಯೋಗಾಧಿಕಾರಿ ಪ್ರಭಾಕರ ಅವರು ತಿಳಿಸಿದ್ದಾಎ.

ಲಾಹೋಟಿ ಮೋಟರ್ಸ್ ಪ್ರೈ.ಲಿ ಕಲಬುರಗಿ, (ಅ) ಟ್ರೈನೀ ಟೆಕ್, ಟೆಕ್ನೀಷಿಯನ್ ಹುದ್ದೆಗೆ 05 ಹುದ್ದೆಗಳು ಖಾಲಿ ಇದ್ದು ಅರ್ಹತೆ ಯಾವುದೇ ಐಟಿಐ,, ಎಮ್. ಎಮ್.ವಿ.ಡಿವಿಎಮ್, ಎಲೇಕ್ಟ್ರೀಷಿಯನ್ ವಿದ್ಯಾರ್ಹತೆ ಹೊಂದಿರಬೇಕು. (ಆ) ಸುಪರ್ ವೈಜರ್ ಸರ್ವಿಸ್ ಅಡ್ವೈಸರ್ ಹುದ್ದೆಗೆ 02 ಹುದ್ದೆಗಳು ಕಾಲಿ ಇದ್ದು, ಅರ್ಹತೆ ಡಿಪ್ಲೋಮ ಮೇಕ್ಯಾನಿಕಲ್, ಅಟೋಮೊಬೈಲ್, ಎಲೆಕ್ಟ್ರೀಕಲ್ ಎಂಜಿನಿಯರ್, ವಿದ್ಯಾರ್ಹತೆ ಹೊಂದಿರಬೇಕು. (ಇ) ಇನ್ಶೂರೆನ್ಸ್, ಅಕೌಂಟ್ಸ್ ಹುದ್ದೆಗೆ 06 ಹುದ್ದೆಗಳು ಖಾಲಿ ಇದ್ದು, ಅರ್ಹತೆ ಯಾವುದೇ ಪದವಿ ಬಿಎ, ಬಿ.ಕಾಂ, ಬಿ.ಎಸ್ಸಿ, ಬಿಬಿಎ, ಬಿಬಿಎಮ್ ವಿದ್ಯಾರ್ಹತೆ ಹೊಂದಿರಬೇಕು. (ಈ) ಸೇಲ್ಸ್, ಸರ್ವಿಸ್, ಬಾಡಿಶಾಪ್, ಹುದ್ದೆಗೆ 4 ಹುದ್ದೆಗಳು ಖಾಲಿ ಇದ್ದು, ಅರ್ಹತೆ ಯಾವುದೇ ಪದವಿ ಬಿಎ, ಬಿ.ಕಾಂ,ಬಿ. ಎಸ್ಸಿ,ಬಿಬಿಎ,ಬಿಬಿಎಮ್ ವಿದ್ಯಾರ್ಹತೆ ಹೊಂದಿರಬೇಕು. ಯಾದಗಿರಿ, ಕಲಬುರಗಿ, ಬೀದರ್ ಉದ್ಯೋಗ ಸ್ಥಳವಾಗಿದೆ. ವಯೋಮಿತಿ 18 ರಿಂದ 40 ವರ್ಷ ಒಳಗಿರಬೇಕು.

ಪುರುಷ ಅಭ್ಯರ್ಥಿಗಳು ಮಾತ್ರ ಭಾಗವಹಿಸಬಹುದಾಗಿದೆ. ಸಂಭವ್ ಫೌಡೇಷನ್, (ಅ) ಟೆಕ್ನೀಕಲ್ ಅಸಿಸ್ಟಂಟ್ ಹುದ್ದೆಗೆ 100 ಹುದ್ದೆಗಳು ಖಾಲಿ ಇದ್ದು ಅರ್ಹತೆ ಐಟಿಐ, ಡಿಪ್ಲೋಮ, ವಿದ್ಯಾರ್ಹತೆ ಹೊಂದಿರಬೇಕು. (ಆ) ಆಫೀಸ್ ಅಸಿಸ್ಟಂಟ್, ಹುದ್ದೆಗೆ 100 ಹುದ್ದೆಗಳು ಖಾಲಿ ಇದ್ದು, ಅರ್ಹತೆ ಪಿಯುಸಿ, ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರಬೇಕು. ಪುರುಷ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. ಬೆಂಗಳೂರು ಉದ್ಯೋಗ ಸ್ಥಳವಾಗಿದೆ. (ಇ) ಮೊಬಲೈಸರ್ ಹುದ್ದೆಗೆ 03 ಹುದ್ದೆಗಳು ಖಾಲಿ ಇದ್ದು, ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರಬೇಕು. ಯಾದಗಿರಿ ಉದ್ಯೋಗ ಸ್ಥಳವಾಗಿದೆ. ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. 18 ರಿಂದ 26 ವರ್ಷ ಒಳಗಿರಬೇಕು, ಅವಕಾಶ ವಂಚಿತ ನಿರುದ್ಯೋಗಿ ಅಭ್ಯರ್ಥಿಗಳು ನೇರ ಸಂದರ್ಶನಕ್ಕೆ ಹಾಜರಾಗಲು ತಿಳಿಸಲಾಗಿದೆ. ನೇರ ಸಂದರ್ಶನಕ್ಕೆ ಬರುವ ಅಭ್ಯರ್ಥಿಗಳು ತಮ್ಮ ದಾಖಲಾತಿಗಳೊಂದಿಗೆ ವ್ಯಕ್ತಿ ಪರಿಚಯ ರಿಸ್ಯೂಮ್, ಬಯೋಡಾಟಾದೊಂದಿಗೆ ನೇರ ಸಂದರ್ಶನಕ್ಕೆ ಹಾಜರಾಗಲು ತಿಳಿಸಲಾಗಿದೆ. ನೇರ ಸಂದರ್ಶನಕ್ಕೆ ಹಾಜರಾದ ಅಭ್ಯರ್ಥಿಗಳಿಗೆ ಯಾವುದೇ ತರಹದ ಭತ್ಯೆ ನೀಡಲಾಗುವುದಿಲ್ಲ. ನೇರ ಸಂದರ್ಶನ ನಡೆಯುವ ಸ್ಥಳ ಚಿತ್ತಾಪೂರು ರೋಡ್ (ಮಿನಿ ವಿಧಾನ ಸೌಧ) ಜಿಲ್ಲಾಡಳಿತ ಭವನ, ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ಬಿ ಬ್ಲಾಕ್, ರೂ.ನಂ. ಬಿ1, ಬಿ2 2ನೇ ಮಹಡಿ ಯಾದಗಿರಿ ದೂ.ಸಂ.08473253718, ಮೊ.ನಂ. 9448566765ಗೆ ಕಛೇರಿಯ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಸಲ್ಲಿಸಿ ಕಿರು ಸಾಲ ಸೌಲಭ್ಯ ಪಡೆದುಕೊಳ್ಳಿ–ಶರಣಬಸಪ್ಪ ಕೋಟೆಪ್ಪಗೋಳ

**ಯಾದಗಿರಿ:** ಕೋವಿಡ್–19ರ ಸಂದರ್ಭದಲ್ಲಿ ಮಾನ್ಯ ಪ್ರಧಾನ ಮಂತ್ರಿಗಳ ಆತ್ಮ ನಿರ್ಭರ್ ನಿಧಿ ಯೋಜನೆಯಡಿ ಬೀದಿ ಬದಿ ವ್ಯಾಪಾರಿಗಳಿಗೆ ವ್ಯಾಪಾರವನ್ನು ವಿಸ್ತರಿಸಿಕೊಳ್ಳಲು ಬ್ಯಾಂಕುಗಳ ಮೂಲಕ ಕಡಿಮೆ ಬಡ್ಡಿ ದರದಲ್ಲಿ ಕಿರು ಸಾಲ ಸೌಲಭ್ಯವನ್ನು ಕಲ್ಪಿಸಿಕೊಡಲಾಗಿದ್ದು, ಸದರಿ ಸೌಲಭ್ಯವನ್ನು ಜಿಲ್ಲೆಯ ಎಲ್ಲಾ ನಗರ ಪ್ರದೇಶದಲ್ಲಿನ ಬೀದಿ ಬದಿ ವ್ಯಾಪಾರಿಗಳು ಪಡೆದುಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳಾದ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ತಿಳಿಸಿದ್ದಾರೆ.

ಪ್ರಧಾನ ಮಂತ್ರಿ ಆತ್ಮ ನಿರ್ಭರ್ ನಿಧಿ ಯೋಜನೆಯಡಿ ಬೀದಿ ಬದಿ ವ್ಯಾಪಾರಿಗಳ ಆರ್ಥಿಕ ಸುಭದ್ರತೆಗಾಗಿ 03 ಕಂತುಗಳಲ್ಲಿ ಸಾಲ ಸೌಲಭ್ಯವನ್ನು ಕಲ್ಪಿಸಲಾಗುವುದು. ಮೊದಲ ಕಂತಿನಲ್ಲಿ ರೂ.10,000 ರಷ್ಟು ಸಾಲ ನೀಡಿ, 12 ತಿಂಗಳ ಅವಧಿಯಲ್ಲಿ ಸಾಲ ಮರು ಪಾವತಿ ಮಾಡಿದಲ್ಲಿ ರೂ.20,000 ರಷ್ಟು ಸಾಲ ನೀಡಲಾಗುವುದು, ಸದರಿ ಸಾಲವನ್ನು 18 ತಿಂಗಳ ಅವಧಿಯಲ್ಲಿ ಮರು ಪಾವತಿ ಮಾಡಿದಲ್ಲಿ ರೂ.50,000 ರಷ್ಟು ಸಾಲ ಸೌಲಭ್ಯವನ್ನು ನೀಡಲಾಗುವುದು. ಜಿಲ್ಲೆಯ ಎಲ್ಲಾ ಬೀದಿ ವ್ಯಾಪಾರಿಗಳು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅರ್ಜಿ ಸಲ್ಲಿಸುವುದರೊಂದಿಗೆ ಸಾಲ ಸೌಲಭ್ಯವನ್ನು ಪಡೆದುಕೊಳ್ಳಬೇಕು.

ಈಗಾಗಲೇ ಸಾಲಕ್ಕಾಗಿ ಅರ್ಜಿಸಲ್ಲಿಸಿದ ಫಲಾನುಭವಿಗಳು ತಾವು ಅರ್ಜಿಸಲ್ಲಿಸಿದ ಬ್ಯಾಂಕುಗಳಿಗೆ ಭೇಟಿ ನೀಡಿ ಅಗತ್ಯ ದಾಖಲಾತಿಗಳನ್ನು ನೀಡಿ ಸಾಲ ಪಡೆದುಕೊಳ್ಳಬೇಕು. ಅದರ ಜೊತೆಗೆ ಡಿಜಿಟಲ್ ವಹಿವಾಟಿಗಾಗಿ ಕ್ಯೂಆರ್ ಕೋಡ್ ಮಾಡಿಸಿಕೊಳ್ಳಬೇಕು.

ಹಾಗೂ ನಗರ ಸ್ಥಳೀಯ ಸಂಸ್ಥೆಗಳಿಂದ ಕೈಗೊಳ್ಳಲಾಗುವ ಸಮೀಕ್ಷೆಗೊಳಗಾಗಿ ಸಾಮಾಜಿಕ ಭದ್ರತಾ ಯೋಜನೆಗಳ ಸೌಲಭ್ಯವನ್ನು ಪಡೆದುಕೊಳ್ಳಬೇಕು. ಮತ್ತು ಜಿಲ್ಲೆಯ ಎಲ್ಲಾ ಬ್ಯಾಂಕಿನ ವ್ಯವಸ್ಥಾಪಕರುಗಳು ಸದರಿ ಯೋಜನೆಯಡಿ ಅರ್ಜಿಸಲ್ಲಿಸಿದ ಫಲಾನುಭವಿಗಳಿಗೆ ಯಾವುದೇ ವಿಳಂಭವಿಲ್ಲದೆ ಸಾಲಕ್ಕಾಗಿ ಆಯ್ಕೆ ಹಾಗೂ ವಿತರಣೆ ಮಾಡಿ ಯೋಜನೆಯ ಪ್ರಗತಿಗೆ ಸಹಕರಿಸಬೇಕು. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಮುದಾಯ ಸಂಘಟನಾಧಿಕಾರಿ, ಸಮುದಾಯ ಸಂಘಟಕರನ್ನು ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದ್ದಾರೆ.

# ಬೆಂಬಲ ವ್ಯಕ್ತಿಗಳಿಗೆ ಸೇವೆ ಸಲ್ಲಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

**ಯಾದಗಿರಿ:** ಪೊಕ್ಸೋ ಕಾಯ್ದೆಯಡಿ ಸಂತ್ರಸ್ಥ ಮಕ್ಕಳಿಗೆ ಬೆಂಬಲ ವ್ಯಕ್ತಿಗಳಿಗೆ ಸೇವೆ ಸಲ್ಲಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಶ್ರೀ ಪ್ರೇಮಮೂರ್ತಿ.ಕೆ ಅವರು ತಿಳಿಸಿದ್ದಾರೆ.

ಅಭ್ಯರ್ಥಿಗಳು ಸಮಾಜಶಾಸ್ತ್ರ ಅಥವಾ ಮನೋವಿಜ್ಞಾನ ಅಥವಾ ಮಕ್ಕಳ ಅಭಿವೃದ್ಧಿ ಅಥವಾ ಮಕ್ಕಳೊಂದಿಗೆ ಕೆಲಸ ಮಾಡುವಲ್ಲಿ 3 ವರ್ಷಗಳ ಅನುಭವದೊಂದಿಗೆ ಸಮಾಜ ಕಾರ್ಯ ವಿಷಯದಲ್ಲಿ ಪದವಿಯನ್ನು ಹೊಂದಿರಬೇಕು, ಪ್ರತಿ ಪ್ರಕರಣಕ್ಕೆ 3000 ರೂ.ಗಳ ಸಂಭಾವನೆ ನಿಗದಿಗೊಳಿಸಲಾಗಿದೆ. ಮಕ್ಕಳ ಆರೈಕೆ ಕೇಂದ್ರದಲ್ಲಿ ಮಕ್ಕಳೊಂದಿಗೆ ಕೆಲಸ ಮಾಡುವ ಅಧಿಕಾರಿಗಳು ಮಕ್ಕಳ ಹಕ್ಕುಗಳ ಕ್ಷೇತ್ರದಲ್ಲಿ ಕೆಲಸ ಮಾಡುವ ಯಾವುದೇ ಸಂಸ್ಥೆ ಕೂಡಾ ಅರ್ಜಿಸಲ್ಲಿಸಬಹುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ಕ್ಷೇತ್ರ ಕಾರ್ಯವನ್ನು ಮಾಡಲು ಮತ್ತು ಅಪರಾದ ನ್ಯಾಯ ವ್ಯವಸ್ಥೆಯ ಮೂಲಕ ಮಕ್ಕಳು ಮತ್ತು ಅವರ ಕುಟುಂಬಗಳಿಗೆ ಸಹಾಯ ಮಾಡಲು ತರಬೇತಿ ನೀಡಲಾಗುತ್ತದೆ.ಅರ್ಜಿಗಳನ್ನುಸಲ್ಲಿಸುವಅರ್ಜಿದಾರರು ತಮ್ಮ ಅವಶ್ಯಕ ದಾಖಲಾತಿಗಳೊಂದಿಗೆ ಅಕ್ಟೋಬರ್ 30ರ ಒಳಗೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಛೇರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಕೋಣೆ ಸಂಖ್ಯೆ ಸಿ–17, ಚಿತ್ತಾಪೂರ ರಸ್ತೆ, ಮಿನಿ ವಿಧಾನಸೌಧ ಯಾದಗಿರಿಗೆ ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲೋಕಾಯುಕ್ತರಿಂದ ಅಹವಾಲು ಅರ್ಜಿ ಸ್ವೀಕಾರ

**ಯಾದಗಿರಿ :** ಜಿಲ್ಲೆಯ ಹುಣಸಗಿ ಮತ್ತು ವಡಗೇರಾ ತಾಲ್ಲೂಕು ಕೇಂದ್ರದಲ್ಲಿ ಸರ್ಕಾರಿ ಕಛೇರಿಗಳಲ್ಲಿನ ಕುಂದುಕೊರತೆ ಮತ್ತು ಭ್ರಷ್ಟಾಚಾರದ ಬಗ್ಗೆ ಅಹವಾಲು ಸ್ವೀಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಯಾದಗಿರಿ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಬಿ.ಕೆ ಉಮೇಶ ಅವರು ತಿಳಿಸಿದ್ದಾರೆ.

ಯಾರಿಗಾದರೂ ಸರ್ಕಾರಿ ಅಧಿಕಾರಿಗಳಿಂದ ತಮಗೆ ಆಗಬೇಕಾದ ಕೆಲಸಗಳಲ್ಲಿ ವಿಳಂಬವಾಗಿದ್ದರೆ ಅಥವಾ ಅಧಿಕಾರಿಗಳು ನ್ಯಾಯಯುತವಾಗಿ ಮಾಡಿಕೊಡಬೇಕಾದ ಕೆಲಸಗಳಲ್ಲಿ ವೃಥಾ ತೊಂದರೆ ಕೊಡುತ್ತಿದ್ದರೆ ಅಥವಾ ಭ್ರಷ್ಟಾಚಾರಕ್ಕೆ ಸಂಬಂಧಿಸಿದ ದೂರುಗಳಿದ್ದಲ್ಲಿ, ಸಭೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಸಭೆಯ ಸದುಪಯೋಗ ಪಡೆದುಕೊಳ್ಳಬೇಕು.

ಹುಣಸಗಿ ತಾಲ್ಲೂಕು 2024ರ ಅಕ್ಟೋಬರ್ 21ರ ಸೋಮವಾರ ರಂದು ಬೆಳಿಗ್ಗೆ 11.30 ರಿಂದ 1.30 ಗಂಟೆಯ ವರೆಗೆ ಹುಣಸಗಿ ತಹಶೀಲ್ ಕಛೇರಿ ಸಭಾಂಗಣದಲ್ಲಿ ಸಭೆ ನಡೆಯಲಿದೆ. ವಡಗೇರಾ ತಾಲ್ಲೂಕು 2024ರ ಅಕ್ಟೋಬರ್ 22ರ ಮಂಗಳವಾರ ರಂದು ಬೆಳಿಗ್ಗೆ 11.30 ರಿಂದ 1.30 ಗಂಟೆಯ ವರೆಗೆ ವಡಗೇರಾ ತಹಶೀಲ್ ಕಛೇರಿ ಸಭಾಂಗಣದಲ್ಲಿ ಸಭೆ ನಡೆಯಲಿದೆ.ಎಲ್ಲಾ ಇಲಾಖೆಗಳ ತಾಲ್ಲೂಕ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದು, ಸಾರ್ವಜನಿಕರು ತಮ್ಮ ಕುಂದುಕೊರತೆಗಳನ್ನು ನೇರವಾಗಿ ಬಂದು ಸಲ್ಲಿಸಲು ಹಾಗೂ ಸ್ಥಳದಲ್ಲಿಯೇ ಇದ್ದ ಅಧಿಕಾರಿಗಳೊಂದಿಗೆ ಕೆಲಸ ನೆರವೇರಿಸಿಕೊಳ್ಳಲು ಅಥವಾ ಸ್ಥಳದಲ್ಲಿಯೇ ದೂರು ಅರ್ಜಿಯ ಫಾರಂ ನಂ.1,2 ತೆಗೆದುಕೊಂಡು ದೂರು ನೀಡಲು ಅನುಕೂಲ ಕಲ್ಪಿಸಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಪೊಲೀಸ್ ಅಧೀಕ್ಷಕರು ಮೊ.ನಂ.9364062529, ಪೊಲೀಸ್ ಉಪಾಧೀಕ್ಷಕರು ಮೊ.ನಂ.9364062589, ಪೊಲೀಸ್ ನಿರೀಕ್ಷಕರು–1 ಮೊ.ನಂ.9364062714, ಪೊಲೀಸ್ ನಿರೀಕ್ಷಕರು–2 ಮೊ.ನಂ.9364062715ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಸ್ತೆಗಳ ಮೇಲೆ ಬಿಡಾಡಿ ದನಗಳು ಮಾಲೀಕರ ಗಮನಕ್ಕೆ

**ಯಾದಗಿರಿ :** ಯಾದಗಿರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ರಸ್ತೆಗಳ ಮೇಲೆ ಬಿಡಾಡಿ ದನಗಳು, ಎಲ್ಲೇಂದರಲ್ಲಿ ಕೂಡುತ್ತಿರುವುದರಿಂದ ಸಾರ್ವಜನಿಕ ಸಂಚಾರಕ್ಕೆ ಮತ್ತು ವಾಹನ ಸಂಚಾರಕ್ಕೆ ಬಾಹಳಷ್ಟು ಅಡಚಣೆ ಉಂಟಾಗುತ್ತಿದ್ದು, ಬಾಹಳಷ್ಟು ದೂರುಗಳು ನಗರಸಭೆಗೆ ಬಂದಿರುವುದರಿಂದ ತುರ್ತಾಗಿ ಎಲ್ಲಾ ದನಗಳು ಮಾಲೀಕರ ಗಮನಕ್ಕೆ ತಿಳಿಸಲಾಗಿದೆ ಎಂದು ಯಾದಗಿರಿ ನಗರಸಭೆ ಪೌರಾಯುಕ್ತರು ರಜನಿಕಾಂತ ಶೃಂಗೇರಿ ಅವರು ತಿಳಿಸಿದ್ದಾರೆ.

ತಮ್ಮ ತಮ್ಮ ದನ ಕರುಗಳನ್ನು ರಸ್ತೆಯ ಮೇಲೆ ಬಿಡದೇ ತಮ್ಮ ಹದ್ದುಬಸ್ತನಲ್ಲಿ ಇಟ್ಟುಕೊಳ್ಳಬೇಕು, ಇಲ್ಲವಾದಲ್ಲಿ ಯಾವುದೇ ಸೂಚನೆಯನ್ನು ನೀಡದೆ ತಮ್ಮ ದನ ಕರುಗಳನ್ನು ನಗರಸಭೆ ವಶಕ್ಕೆ ತೆಗೆದುಕೊಳ್ಳಲಾಗುವುದು. the prevention of cruelty to animals act, 1960 and criminal procedure code 1898 ಕಾಯ್ದೆ ಕಲಂ 133 (removal of public nuisances) ಕಾಯ್ದೆ ಮತ್ತು ಕರ್ನಾಟಕ ಪೌರಾಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ತಮ್ಮ ದನ ಕರಗಳನ್ನು ಜಪ್ತಿ ಮಾಡಿಕೊಂಡು ದನ ಕರಗಳ ಮಾಲೀಕರ ಮೇಲೆ ನ್ಯಾಯಾಲಯದಲ್ಲಿ ದಾವೆ ಹೊಡಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹನಿಟ್ರ್ಯಾಪ್–ಬ್ಲಾಕ್ ಮೇಲ್ ಪ್ರಕರಣಕಲಬುರಗಿ ಕಾರಾಗೃಹಕ್ಕೆ ಎಸ್ಪಿ ಯಶೋಧಾ ಭೇಟಿ



ಕಲಬುರಗಿ: ಇಲ್ಲಿನ ಸೆಂಟ್ರಲ್ ಜೈಲಿನಲ್ಲಿ ಕೈದಿ ಜುಲ್ಫೀಕರ್ ಹಾಗೂ ಆತನ ಸಹಚರರು ಹನಿಟ್ರ್ಯಾಪ್ ಹೆಸರಿನಲ್ಲಿ ಸಹವರ್ತಿ ಕೈದಿಗಳು ಹಾಗೂ ಕಾರಾಗೃಹ ಸಿಬ್ಬಂದಿಗೆ ಬ್ಲಾಕ್ ಮೇಲ್ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಹಿತಿ ಕಲೆ ಹಾಕಲು ಕಾರಾಗೃಹ ಎಡಿಜಿಪಿ ಕಚೇರಿಯ ಎಸ್ಪಿ ಯಶೋಧಾ ಇಂದು ಕಲಬುರಗಿ ಕಾರಾಗೃಹಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಬೆಂಗಳೂರಿನಿಂದ ಕಲಬುರಗಿ ಕೇಂದ್ರ ಕಾರಾಗೃಹಕ್ಕೆ ಆಗಮಿಸಿದ ಯಶೋಧಾ ಕಾರಾಗೃಹ ಅಧೀಕ್ಷಕರು ಹಾಗೂ ಸಿಬ್ಬಂದಿಯೊಂದಿಗೆ ಈ ನಿಟ್ಟಿನಲ್ಲಿ ಮಾತುಕತೆ ನಡೆಸಿದ್ದಾರೆ.

ಕಲಬುರಗಿ ಸೆಂಟ್ರಲ್ ಜೈಲಿನಲ್ಲಿ ಕೈದಿ ಸಾಗರ್ ಎಂಬಾತನನ್ನು ವಿಡಿಯೋ ಕರೆ ಮೂಲಕ ಹನಿಟ್ರ್ಯಾಪ್ ಜಾಲಕ್ಕೆ ದೂಡಿದ್ದಲ್ಲದೆ, ಈ ಪ್ರಕರಣ ಮುಚ್ಚಿ ಹಾಕಲು ರೂ.50 ಸಾವಿರ ನೀಡುವಂತೆ ಬ್ಲಾಕ್ ಮೇಲ್ ಮಾಡಿದ್ದಲ್ಲದೆ, ಇದೇ ಪ್ರಕರಣ ಬಳಸಿಕೊಂಡು ಜೈಲಿನ ಸಿಬ್ಬಂದಿಗೂ ಬ್ಲಾಕ್ ಮೇಲ್ ಮಾಡಲು ಯತ್ನಿಸಿದ್ದಾನೆ ಎನ್ನಲಾಗುತ್ತಿದೆ. ಇದರಿಂದ ಕಾರಾಗೃಹ ಇಲಾಖೆ ಮುಜುಗರಕ್ಕೆ ಒಳಗಾಗಿರುವ ಹಿನ್ನೆಲೆಯಲ್ಲಿ ತಕ್ಷಣ ಕಾರಾಗೃಹ ಎಡಿಜಿಪಿ ಕಚೇ–ರಿಯ ಎಸ್ಪಿ ಯಶೋಧಾ ಅವರನ್ನು ಘಟನೆಯ ಮಾಹಿತಿ ಕಲೆ ಹಾಕಲು ರವಾನಿಸಿದೆ.

ರಾಜ್ಯದ ಕಾರಾಗೃಹಗಳಲ್ಲಿ ವ್ಯಾಪಕ ಸುಧಾರಣೆ ಕೈಗೊಳ್ಳುವ ಪ್ರಯತ್ನಗಳು ನಡೆಯುತ್ತಿರುವ ಬೆನ್ನಲ್ಲಿಯೇ ಬೆಂಗಳೂರಿನ ಪರಪ್ಪನ ಅಗ್ರಹಾರ ಕಾರಾಗೃಹದಲ್ಲಿ ನಟ ದರ್ಶನ್ ಹಾಗೂ ಗ್ಯಾಂಗ್ ರಾಜಾತಿಥ್ಯ ಪಡೆದ ಘಟನೆಯಿಂದ ಮುಜುಗರಕ್ಕೆ ಒಳಗಾಗಿದ್ದ ಇಲಾಖೆ ಇದೀಗ ಗಾಂಜಾ, ಸಿಗರೇಟು, ಹನಿಟ್ರ್ಯಾಪ್ ಘಟನೆಗಳಿಂದಾಗಿ ಕಲಬುರಗಿ ಸೆಂಟ್ರಲ್ ಜೈಲು ಮೇಲಿಂದ ಮೇಲೆ ಸುದ್ದಿಗೆ ಗ್ರಾಸವಾಗುತ್ತಿರುವುದು ಕಾರಾಗೃಹ ಇಲಾಖೆಯ ಅಧಿಕಾರಿಗಳಿಗೆ ತಲೆನೋವು ಹೆಚ್ಚಿಸಿದೆ.

# ಮಕ್ಕಳಿಗೆ ಧಾರ್ಮಿಕ ಜಾಗೃತಿ ಮೂಡಿಸುವುದು ಪಾಲಕರ ಕರ್ತವ್ಯ :ಶಿವರಾಜ ಅಂಡಗಿ



ಕಲಬುರಗಿ: ಇಂದಿನ ಮಕ್ಕಳು ವಾಟ್ಸಆಫ್, ಫೇಸಬೂನಲ್ಲಿ ಅತಿಯಾದ ಸಮಯವನ್ನು ಕಳೆಯುತ್ತಿರುವ ಹಿನ್ನಲ್ಲೆಯಲ್ಲಿ ಟೆಂಗಳಿ ಅಂಭಾ ಭವಾನಿ ದೇವಸ್ಥಾನದಲ್ಲಿ ನಡೆದಿರುವ ಧಾರ್ಮಿಕ ಕಾರ್ಯಕ್ರಮದಲ್ಲಿ ಇಂದಿನ ಮಕ್ಕಳಿಗೆ ಒಂದಿಷ್ಟು ಧಾರ್ಮಿಕ ಹಬ್ಬಗಳ ಹೀರಿಮೆ ಗ–ರಿಮೇ ಕುರಿತು ಜಾಗೃತಿ ಮೂಡಿಸೂವ ಉದ್ದೇದಿಂದಲೇ ದಸರಾ ಹಬ್ಬ ಕುರಿತು ಪ್ರಭಂದ ಸ್ಪರ್ದೆ ಏರ್ಪಡಿಸಿ ಆ ಮಕ್ಕಳಿಗೆ ಕೇಸರಿ ಬಣ್ಣದ ಟೋಪಿ ಮತ್ತು ಶಾಲನ್ನು ಧ–ರಿಸುವ ಮೂಲಕ ಜಾಗೃತಿ ಮೂಡಿಸುವಂತಹ ಪ್ರಾಮಾಣಿಕ ಪ್ರಯತ್ನವಾದಿದೆ ಎನ್ನುತ್ತಾ ನೇರದಿದ್ದ ಪಾಲಕರಿಗೆ ಇದರ ಬಗ್ಗೆ ಕಳಕಳಿ ವಹಿಸಿಬೇಕೆಂದು ಟೆಂಗಳಿ ಅಂಡಗಿ ಪ್ರತಿಷ್ಠಾನ ಅಧ್ಯಕ್ಷ ಶಿವರಾಜ ಅಂಡಗಿ ಪ್ರಾಸ್ತಾವಿಕವಾಗಿ ಮಾತನಾಡಿದ್ದರು.

ವಿದ್ಯಾರ್ಥಿ ಜೀವನ ಮತ್ತೇ ಮತ್ತೇ ಬರುವುದಿಲ್ಲ, ಹೀಗಾಗಿ ಜ್ಞಾನ ಧಾಸೋಹ ಕಲಿಕಾ ಕೇಂದ್ರದ ವಿದ್ಯಾರ್ಥಿಗಳು ಸಮಯ ಪರಿಪಾಲನೆ ಮಾಡುತ್ತಾ ಶಿಕ್ಷಣ–ಕ್ಕೆ ಒತ್ತು ಕೊಟ್ಟು ಪಠ್ಯದ ವಿಷಯದೊಂದಿಗೆ ಪಠ್ಯೇತರ ಚಟುವಟಿಕೆ ಕೂಡಾ ಮುಖ್ಯವಾದ್ದುದು ಅದರೊಂದಿಗೆ ನಮ್ಮ ಸನಾತನ ಧರ್ಮದ ಪದ್ಧತಿ, ಆಚರಣೆ, ಚಿಂತನೆ–ಮಂತನೆ ಮಾಡುವುದು ಹಿಂದೇಂದಿಗಿಂತಲೂ ಈಗ ಅವಶ್ಯಕವಿದೆ ಎನ್ನುತ್ತಾ ಅಂಡಗಿ ಪ್ರತಿಷ್ಠಾನ ವತಿಯಿಂದ ಹಮ್ಮಿಕೊಳ್ಳಲಾಗಿದೆ. ದಿನಾಂಕ: 17/10/2024 ರಂದು ಟೆಂಗಳಿ ಗ್ರಾಮದ ಅಂಭಾಭವಾನಿ ದೇವಸ್ಥಾನದಲ್ಲಿ 47ನೇ ಉಡಿ ತುಂಬುವ 47ನೇ ವಾರ್ಷಿಕೋತ್ಸವ ನಿಮಿತ್ಯ ಅಂಡಗಿ ಪ್ರತಿಷ್ಠಾನ ವತಿಯಿಂದ ಜ್ಞಾನ ಧಾಸೋಹ ಕಲಿಕಾ ಕೇಂದ್ರದ ಮಕ್ಕಳಿಗೆ ದಸರಾ ಕು–ರಿತು ಏರ್ಪಡಿಸಿದ ಪ್ರಬಂಧ ಸ್ಪರ್ದೇ ಭಾಗವಹಿಸಿದ ಮಕ್ಕಳಿಗೆ ಪ್ರಶಸ್ತಿ ಪತ್ರ ವಿತರಣಾ ಸಮಾರಂಭದ ಸಾನಿಧ್ಯ ವಹಿಸಿದ ಡಾ॥ ಶಾಂತಸೋಮನಾಥ ಶಿವಾಚಾರ್ಯರು ಮಾತಾನಾಡಿದರು.

ಟೆಂಗಳಿ ಗ್ರಾಮದ ಮುಖ್ಯ ರಸ್ತೆಯಲ್ಲಿ ಲಕ್ಷಾಂತರ ರೂಪಾಯಿ ಬೆಳೆಬಾಳುವ ಭೂಮಿ ದೇವಸ್ಥಾನಕ್ಕೆ ಕಟ್ಟಲು ಭೂಮಿ ದೇಣಿಗೆ ನೀಡಿದ ಧನಂಜಯ ಕುಲಕರ್ಣಿ ಅವರಿಗೂ ಹಾಗೂ ಆ ದೇವಸ್ಥಾನದಲ್ಲಿ ನಿರಂತರವಾಗಿ ಧಾರ್ಮಿಕ ಕಾರ್ಯಕ್ರಮಗಳು ಗ್ರಾಮದಲ್ಲಿನ ಸಾಮಾಜಿಕ ಹಾಗೂ ರಾಜಕೀಯ ಕ್ಷೇತ್ರದಲ್ಲಿ ಮಾಡಿರುವ ಶ್ರಮಧಾನ ಅನನ್ಯಸೇವೆ ಸಲ್ಲಿಸಿದ ದಿ.ಶೀವಶರಣಪ್ಪ ಅಂಡಗಿ ಇವರಿಬ್ಬರ ಸೇವೆ ಅನನ್ಯ ಹಾಗೂ ಶ್ಲಾಗನೇಯವಾದ್ದುದು ಎಂದು ಕಾರ್ಯಕ್ರಮಕ್ಕೆ ಮುಖ್ಯ ಅತೀಥಿಗಳಾಗಿ ಆಗಮೀಸಿದ ವೀರಭದ್ರಯ್ಯ ಸಾಲಿಮಠ ಮಾಡನಾಡಿದ್ದರು. ಡಾ॥ ಓಂ ಪ್ರಕಾಶ ಹೆಬ್ಬಾಳ ಸ್ವಾಗತಿಸಿದರು, ರೇಖಾ ಅಂಡಗಿ ಪ್ರಾರ್ಥೀಸಿದರು, ವಿನೋದ ಕುಮಾರ ಜನೇವರಿ ಒಂದಿಸಿದರು. ಭಜನಾ ಕಲಾವಿದರಾದ ಭೀರಣ್ಣ ಪೂಜಾರಿ, ವಿಶ್ವನಾಥ ಭಾಳದೆ, ಚಂದ್ರಶೇಖರ ಯಲ್ಢೇರಿ, ಫಕೀರಯ್ಯ ಸ್ವಾಮಿ, ಪರಿಣಿತಿ ವಿಭೂತಿ ಇವರಿಂದ ಭಜನಿ ಮಾಡುವ ಮೂಲಕ ಜಾಗರಣೆ ಮಾಡಿದ್ದರು. ಈ ಕಾರ್ಯಕ್ರಮದಲ್ಲಿ ವಿಜಯಕುಮಾರ ತುಪ್ಪದ, ಶಿವಲಿಂಗಪ್ಪ ಅಷ್ಟಗಿ, ಡಾ॥ ವಿವೇಕಾನಂದ ಬುಳ್ಳ, ಅಣವೀರಪ್ಪ ಅಂದೇಲಿ, ಗುಂಡಪ್ಪ ಪಾಟೇದ, ರಾಜು ಕೋಷ್ಟೀ, ನಾಗರಾಜ ಮಹಾಗಾಂವ, ಫಕೀರಯ್ಯ ಸ್ವಾಮಿ, ಬಸವರಾಜ ತುಪ್ಪದ ರಾಜಶೇಖರ ಮರಪಳ್ಳಿ ಮಹಾದೇವ ಸ್ವಾಮಿ, ಅಚಲರಾಜ ಅಂಡಗಿ, ನಿರ್ಮಲ ಮಠಪತಿ, ಭವಾನಿ ಮಠಪತಿ ಹಾಗೂ ಜ್ಞಾನ ದಾಸೋಹ ಕಲಿಕಾ ಕೇಂದ್ರದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಡಾ.ಬರಗೂರು ರಾಮಚಂದ್ರಪ್ಪನವರು ಶ್ರೇಷ್ಠ ಚಿಂತಕ



ಕಲಬುರಗಿ: ಸಮಾಜದಲ್ಲಿರುವ ತಳಮಟ್ಟದ ಸಮುದಾಯ, ಅಸಹಾಯಕರು, ಧ್ವನಿಯಿಲ್ಲದವರ ಬಗ್ಗೆ ತಮ್ಮ ಆಳವಾದ ಚಿಂತನೆಯ ಮೂಲಕ ಸಮಾಜವನ್ನು ಜಾಗೃತ 'ಗೊಳಿಸುತ್ತಿರುವ ಬಂಡಾಯ ಸಾಹಿತಿ ಡಾ .ಬರಗೂರು ರಾಮಚಂದ್ರಪ್ಪನವರು ಶ್ರೇಷ್ಠ ಚಿಂತಕ, ಲೇಖಕ, ಕಾದಂಬ–ರಿಕಾರರಾಗಿದ್ದಾರೆ ಎಂದು ಉಪನ್ಯಾಸಕ, ಲೇಖಕ ಎಚ್.ಬಿ.ಪಾಟೀಲ ಹೇಳಿದರು.

ನಗರದ ನ್ಯೂ ರಾಘವೇಂದ್ರ ಕಾಲನಿಯಲ್ಲಿನ'ಶ್ರೀವಿವೇಕಾನಂದ ಕೋಚಿಂಗ್ ಕೇಂದ್ರ'ದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಶುಕ್ರವಾರ ಜರುಗಿದ 'ಡಾ.ಬರಗೂರು ರಾಮಚಂದ್ರಪ್ಪನವರ 78ನೇ ಜನ್ಮದಿನಾಚರಣೆ'ಯ ಪ್ರಯುಕ್ತ ಜರುಗಿದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕಸಾಪ ಉತ್ತರ ವಲಯದ ಗೌರವ ಅಧ್ಯಕ್ಷ ಶಿವಯೋಗೆಪ್ಪಾ ಎಸ್.ಬಿರಾದಾರ, ಬರಗೂರು ಅವರಲ್ಲಿರುವ ಸಮಾಜಪರ ಕಾಳಜಿ, ವೈಚಾ–ರಿಕ ಪ್ರಜ್ಞೆ ಶ್ಲಾಘನೀಯವಾಗಿದೆ ಎಂದರು. ಸಂಸ್ಥೆಯ ಮುಖ್ಯಸ್ಥ ಬಸವರಾಜ ಮಳ್ಳಿ, ಅಕ್ಷತಾ, ಮಲ್ಲಿಕಾರ್ಜುನ ಸೇರಿದಂತೆ ಇನ್ನಿತರರಿದ್ದರು.

# 50 ಸಾವಿರ ಕೋಟಿ ಆಸ್ತಿ ಹುಡುಕಿಕೊಡಿ: ಬಿಜೆಪಿಗೆ ಸಚಿವ ಪ್ರಿಯಾಂಕ್ ಖರ್ಗೆ ಸವಾಲು



ಕಲಬುರಗಿ: ದಮ್ಮು, ತಾಕತ್ತಿನ ಬಿಜೆಪಿಯವರಿಗೆ ನನ್ನ ಸವಾಲು, ಎಲ್ಲ ತನಿಖಾ ಏಜೆನ್ಸಿಗಳನ್ನು ಕಳುಹಿಸಲಿ, ಎಲ್ಲಿ ಬೇಕಾದರೂ ದಾಳಿ ಮಾಡಿಸಲಿ, ನಮ್ಮ ಕುಟುಂಬದ 50 ಸಾವಿರ ಕೋಟಿ ರೂ. ಗಳ ಆಸ್ತಿಯನ್ನು ಹುಡುಕಿಕೊಡಲಿ ಎಂದು ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿರಾಜ್, ಐಟಿಬಿಟಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಸವಾಲು ಹಾಕಿದ್ದಾರೆ.

ಈ ಕುರಿತು ಬಿಜೆಪಿಯು ತಮ್ಮ ಕುಟುಂಬದ ವಿರುದ್ಧ ಮಾಡಲಾಗುತ್ತಿರುವ ಅಪಪ್ರಚಾರದ ಕುರಿತು ಸಾಮಾಜಿ–ಕ ಜಾಲತಾಣದಲ್ಲಿ ಟ್ವೀಟ್ ಮಾಡಿರುವ ಅವರು, ಫೇಕ್ ಫ್ಯಾಕ್ಟರಿಯನ್ನು ಸ್ಥಾಪಿಸಿ ಸುಳ್ಳುಗಳ ವ್ಯಾಪಾರಕ್ಕೆ ಹೆಸರುವಾಸಿಯಾಗಿರುವ ಬಿಜೆಪಿ ಹಾಗೂ ಅದರ ನಾಯಕರು ಬಹಳ ಹಿಂದಿನಿಂದಲೂ ನಮ್ಮ ಕುಟುಂಬದ ಮೇಲೆ 50,000 ಕೋಟಿ ರೂ.ಗಳ ಆಸ್ತಿಯ ಆರೋಪ ಮಾಡುತ್ತಿದ್ದಾರೆ, ಹೀಗೆ ಆರೋಪ ಮಾಡಿದ್ದ ಬಿಜೆಪಿಯ ಕೆಲ ಪುಡಿ ಮುಖಂಡರಿಗೆ ಲೀಗಲ್ ನೋಟಿಸ್ ಕಳಿಸಿದ್ದೆ, ಆದರೆ ಇದುವರೆಗೂ ಅವರ್ಯಾರೂ 50,000 ಕೋಟಿಯ ಅಸ್ತಿಯನ್ನು ತೋರಿಸದಿರುವುದು ನನಗೆ ನಿರಾಸೆಯನ್ನುಂಟು ಮಾಡಿದೆ ಎಂದು ಲೇವಡಿ ಮಾಡಿದ್ದಾರೆ.

ಕಳೆದ ಹನ್ನೊಂದು ವರ್ಷದಿಂದ ಕೇಂದ್ರದಲ್ಲಿ ಬಿಜೆಪಿಯೇ ಅಧಿಕಾರದಲ್ಲಿದೆ, ಸೋಕಾಲ್ಡ್ ಶಕ್ತಿಮಾನ್ ಪ್ರಧಾನಿ ಇದ್ದಾರೆ, ಐಟಿ, ಇಡಿ, ಸಿಬಿಐಗಳಿಗೆ ಇವರ ಕೈನಲ್ಲೇ ಇದ್ದಾವೆ, ಹೀಗಿದ್ದೂ ಇದುವರೆಗೂ ನಮ್ಮ 50,000 ಕೋಟಿಯ ಆಸ್ತಿ ಹುಡುಕಲು ಸಾಧ್ಯವಾಗದಿರುವುದೇಕೆ? ಎಂದು ಅವರು ಖಾರವಾಗಿ ಪ್ರಶ್ನಿಸಿದ್ದಾರೆ.

ದಮ್ಮು, ತಾಕತ್ತಿನ ಬಿಜೆಪಿಯವರಿಗೆ ನನ್ನ ಸವಾಲು, ಎಲ್ಲ ತನಿಖಾ ಏಜೆನ್ಸಿಗಳನ್ನು ಕಳಿಸಲಿ, ಎಲ್ಲಿ ಬೇಕಾದರೂ ರೈಡ್ ಮಾಡಿಸಲಿ, ನಮ್ಮ 50,000 ಕೋಟಿಯ ಆಸ್ತಿಯನ್ನು ಹುಡುಕಿಕೊಡಲಿ. ಯಾರದು ಸುಳ್ಳು, ಯಾರದು ಸತ್ಯ ಎನ್ನುವುದು ಈಗಾಗಲೇ ಜಗತ್ತಿಗೆ ತಿಳಿದಿರುವ ಸಂಗತಿ, ನಿಮಗೆ ನಮ್ಮ 50,000 ಕೋಟಿ ಆಸ್ತಿಯ ದಾಖಲೆ ತೋರಿಸಲಾಗಿಲ್ಲ, ಸಿಎ ನಿವೇಶನ ಹೇಗೆ ಅಕ್ರಮ ಎನ್ನುವುದನ್ನು ನಿರೂಪಿಸಲಾಗಿಲ್ಲ ಎಂದು ಅವರು ದೂರಿದ್ದಾರೆ.

ಆದರೆ, ನನ್ನ ಸತ್ಯಕ್ಕೆ ಹಲವು ನಿದರ್ಶನಗಳಿವೆ. ನಾನು ಬಯಲಿಗೆಳೆದಿದ್ದ ಪಿಎಸ್ಐ ಹಗರಣವನ್ನು ನಿಮ್ಮವರೇ ಒಪ್ಪಿದ್ದಾರೆ, ಅಧಿಕಾರಿಗಳು, ಆರೋಪಿಗಳ ಬಂಧನವಾಗಿದೆ. ನಾನು ಆರೋಪಿಸಿದ್ದ ಬಿಟ್ ಕಾಯಿನ್ ಹಗರಣದಲ್ಲಿ ಪೊಲೀಸ್ ಅಧಿಕಾ–ರಿಗಳ ಬಂಧನವಾಗಿದೆ. ಹಗರಣ–ಕ್ಕೆ ಸಾಕ್ಷ್ಯ ಸಿಕ್ಕಿದೆ. ಗಂಗಾ ಕಲ್ಯಾಣದಲ್ಲಿ ಭ್ರಷ್ಟರ ಕಲ್ಯಾಣವಾಗಿದೆ ಎಂದಿದ್ದೆ, ಅಂತೆಯೇ ನಿಮ್ಮವರೇ ನಡೆದಿರುವ ಅಕ್ರಮವನ್ನು ಒಪ್ಪಿಕೊಂಡಿದ್ದಾರೆ, ಅಧಿಕಾರಿಗಳ ತಲೆದಂಡವಾಗಿದೆ. ಭೋವಿ ನಿಗಮದ ನಡೆದ ಅಕ್ರಮಕ್ಕೆ ಪುರಾವೆ ಸಿಕ್ಕಿದೆ. ತನಿಖೆಯಲಿಸಾಬೀತಾಗಿದೆ. ಟ್ರಕ್ ಟರ್ಮಿನಲ್ ಹಗರಣದಲ್ಲಿ ನಿಮ್ಮವರ ಬಂಧನವಾಗಿದೆ, ಅಕ್ರಮ ನಡೆದಿರುವುದು ಜಗಜ್ಜಾಹೀರಾಗಿದೆ. ಕೋವಿಡ್ ಹಗರಣದಲ್ಲಿ ಅಧಿಕಾ–ರಿಗಳ ತಲೆದಂಡವಾಗಿದೆ, ಸಮಿತಿಯ ತನಿಖೆಯಲ್ಲಿ ಅಕ್ರಮದ ಅಘಾದತೆ ಬಿಚ್ಚಿಕೊಳ್ಳುತ್ತಿದೆ. ಹಗರಣಕ್ಕೆ ಸಾಕ್ಷಿಗಳು ದೊರೆತಿವೆ. ಪರಶುರಾಮ್ ಥೀಮ್ ಪಾರ್ಕ್ ಹಗರಣ ಜನರ ಮುಂದೆ ಬಯಲಾಗಿದೆ. ಕಿಯೋನಿಕ್ಸ್ ಹಗರಣದ ಬಗ್ಗೆ ಸಿಎಜಿ ವರದಿಯಲ್ಲಿ ಪುರಾವೆ ಸಿಕ್ಕಿದೆ ಎಂದು ಅವರು ಬಿಜೆಪಿಯವರ ವಿರುದ್ಧ ಹರಿಹಾಯ್ದಿದ್ದಾರೆ.

ನನ್ನ ಮುಂದಿನ ಹೇಳಿಕೆಗಳ ಬಗ್ಗೆ ತಲೆ ಕೆಡಿಸಿಕೊಳ್ಳುವ ಬದಲು ಬಿಜೆಪಿಯವರು ಈ ಪ್ರಶ್ನೆಗಳಿಗೆ ಉತ್ತರಿಸುವ ಧೈರ್ಯ ತೋರಲಿ, ಯಡಿಯೂರಪ್ಪನವರ ಮೇಲೆ ಪೋಕ್ಸೋ ಪ್ರಕರಣ ಇರುವುದು ಸುಳ್ಳಾ? ಭ್ರಷ್ಟಾಚಾರದಲ್ಲಿ ಜೈಲಿಗೆ ಹೋಗಿದ್ದು ಸುಳ್ಳಾ? ಮುನಿರತ್ನ ಇಬ್ಬರು ಮಾಜಿ ಮುಖ್ಯಮಂತ್ರಿಗಳಿಗೆ ಹನಿಟ್ರಾಪ್ ಮಾಡಿದ್ದು ಸುಳ್ಳಾ? ಬಿಜೆಪಿಯ 15ಕ್ಕೂ ಹೆಚ್ಚು ನಾಯಕರು ಸಿಡಿಗೆ ತಡೆಯಾಜ್ಞೆ ತಂದಿದ್ದು ಸುಳ್ಳಾ? ನಿಮ್ಮ ವಿಧಾನಪ–ರಿಷತ್ ವಿಪಕ್ಷ ನಾಯಕರು ಶಾಲೆ ಹೆಸರಲ್ಲಿ ನಿವೇಶನ ಪಡೆದು ಬಿರಿಯಾನಿ ಹೋಟೆಲ್ ಮಾಡಿದ್ದು ಸುಳ್ಳಾ? ನಿಮ್ಮ ವಿರೋಧ ಪಕ್ಷದ ನಾಯಕರು ಅಕ್ರಮ ನಿವೇಶನ ಪಡೆದು ವಾಪಸ್ ನೀಡಿದ್ದು ಸುಳ್ಳಾ? ಎಂದು ಅವರು ವಾಗ್ದಾಳಿ ಮಾಡಿದ್ದಾರೆ.

# ಕೇಂದ್ರ ಕಾರಾಗೃಹದಲ್ಲಿ ಕೈದಿಗಳ ಗಲಾಟೆ, ಸಿಬ್ಬಂದಿ ಮೇಲೆ ಕಲ್ಲು ತೂರಾಟ: 11 ಜನರ ವಿರುದ್ಧ ಪ್ರಕರಣ

ಕಲಬುರಗಿ: ಇಲ್ಲಿನ ಕೇಂದ್ರ ಕಾರಾಗೃಹದಲ್ಲಿ ಕೈದಿಗಳ ನಡುವೆ ಗಲಾಟೆ ನಡೆದಿದ್ದು, ಈ ವೇಳೆ ಕೈದಿಗಳು ಕರ್ತವ್ಯ ನಿರತ ಜೈಲು ಸಿಬ್ಬಂದಿ ಮೇಲೆ ಕಲ್ಲು ತೂರಾಟ ನಡೆಸಿ ಕರ್ತವ್ಯಕ್ಕೆ ಅಡ್ಡಿ ಪಡಿಸಿದ್ದಾರೆ. ಕೈದಿಗಳು ಕಲ್ಲು ತೂರಾಟ ನಡೆಸಿದ್ದರಿಂದ ಕಾರಾಗೃಹದ ಸೆಲ್ ವಿಭಾಗದ ಸಿಬ್ಬಂದಿ ಶ್ರೀಶೈಲ್ ಹಾಗೂ ಹೆಡ್ ವಾರ್ಡರ್ ಅವರಿಗೆ ಗಾಯವಾಗಿದೆ. ಜೈಲು ಸಿಬ್ಬಂದಿಯ ಕರ್ತವ್ಯಕ್ಕೆ ಅಡ್ಡಿಪಡಿಸಿ, ಅವಾಚ್ಯ ಶಬ್ಧಗಳಿಂದ ನಿಂದಿಸಿ ಕಲ್ಲು ತೂರಾಟ ನಡೆಸಿದ ಆರೋಪದ ಮೇಲೆ ಸಜಾ ಬಂದಿ ಕೈದಿಗಳಾದ ಸಾಗರ ಬ್ಯಾಡರ್, ಅರ್ಜುನ್, ನಾಗರಾಜ, ಮಹಾಂತೇಶ, ಸುನೀಲ ಅಲಿಯಾಸ್ ಸೋನು ಕಾಂಬ್ಳೆ, ವಿಚಾರಣಾಧೀನ ಕೈದಿಗಳಾದ ಜಮೀರ್ ಅಲಿಯಾಸ್ ಬಚ್ಚನ್, ಜುಲ್ಫಿಕರ್, ಶೇಖ್ ಸದ್ದಾಂ, ಜಾಕೀರ್, ಲತೀಫ್ ಮತ್ತು ಅಬ್ದುಲ್ ಖಾದರ್ ಜಿಲಾನಿ ವಿರುದ್ಧ ಫರಹತಾಬಾದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.ಘಟನೆ ವಿವರ: ಕಾರಾಗೃಹದ ಸಜಾ ಬಂದಿ ಓಂಕಾರ ಸ್ವಾಮಿ ಸೆಲ್ ಮುಂಭಾಗದಲ್ಲಿ ತಿರುಗಾಡುತ್ತಾ ಇರುವಾಗ ಸಾಗರ್ ಬ್ಯಾಡರ್, ಸುನೀಲ ಅಲಿಯಾಸ್ ಸೋನು ಕಾಂಬ್ಳೆ ಅವರಿಗೆ ಕೆಟ್ಟ ಪದಗಳಿಂದ ಬೈದಿದ್ದಾನೆ ಎಂದು ಆತನೊಂದಿಗೆ ಜಗಳವಾಡುತ್ತಿರುವಾ, ಕಾರಾಗೃಹದಲ್ಲಿರುವ ವಿಚಾರಣಾಧೀನ ಕೈದಿಗಳು (ಶಿವಮೊಗ್ಗ ಮತ್ತು ಮಂಗಳೂರು ಕಡೆಯವರು) ಬಂದು ಜಗಳ ಬಿಡಿಸಿದ್ದಾರೆ. ಕೈದಿ ಸಾಗರ ಮತ್ತು ಸುನೀಲ ಕಡೆಯವರೆಂದು ಗುರುತಿಸಿಕೊಂಡಿರುವ ಅರ್ಜುನ್, ನಾಗರಾಜ, ಮಹಾಂತೇಶ ಸೇರಿದಂತೆ 20 ರಿಂದ 30 ಜನ ಕೈದಿಗಳು ಸೆಲ್ ಕಡೆಗೆ ಆಗಮಿಸಿ ಕಲ್ಲು ತೂರಾಟ ನಡೆಸಿದ್ದಾರೆ. ಆಗ ವಿಚಾರಣಾಧೀನ ಕೈದಿಗಳಾದ ಜಮೀರ್ ಅಲಿಯಾಸ್ ಬಚ್ಚನ್, ಜುಲ್ಫೀಕರ್, ಶೇಖ್ ಸದ್ದಾಂ, ಜಾಕೀರ್, ಲತೀಫ್, ಅಬ್ದುಲ್ ಖಾದರ್ ಜಿಲಾನಿ ಅವರೊಂದಿಗೆ ಲೋಕಲ್ ಮತ್ತು ನಾನ್ ಲೋಕಲ್ ಎಂದು ಜಗಳ ತೆಗೆದಿದ್ದಾರೆ. ಕೈದಿಗಳು ಜಗಳವಾಡುತ್ತಿರುವ ವಿಷಯ ತಿಳಿದು ಕಾರಾಗೃಹದ ಮೇಲಾಧಿಕಾ–ರಿಗಳು, ಸಿಬ್ಬಂದಿ ಕೈದಿಗಳನ್ನು ಚದುರಿಸಿ ಜಗಳ ನಿಯಂತ್ರಿಸಿ ಕೊಠಡಿಗಳಲ್ಲಿ ಬಂಧಿಸಿಟ್ಟಿದ್ದಾರೆ. ಘಟನೆಯಲ್ಲಿ ಸೆಲ್ ವಿಭಾಗದ ಪ್ರಭಾರ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀಶೈಲ್, ಹೆಡ್ ವಾರ್ಡರ್ ಅವರಿಗೆ ಗಾಯಗಳಾಗಿವೆ. ಜೈಲು ಸಿಬ್ಬಂದಿಯ ಕರ್ತವ್ಯಕ್ಕೆ ಅಡ್ಡಿ ಪಡಿಸಿದ ಮತ್ತು ಕಲ್ಲು ತೂರಾಟ ನಡೆಸಿ ಜೈಲು ಸಿಬ್ಬಂದಿಯನ್ನು ಗಾಯಗೊಳಸಿದ ಆರೋಪದ ಮೇಲೆ ಸಜಾ ಬಂದಿ ಮತ್ತು ವಿಚಾರಣಾ ಕೈದಿಗಳು ಸೇರಿ 11 ಜನ ಕೈದಿಗಳ ವಿರುದ್ಧ ಜೈಲಿನ ಮುಖ್ಯ ಅಧೀಕ್ಷಕಿ ಡಾ.ಅನಿತಾ ಆರ್ ಅವರು ವಾರ್ಡರ್ ನಾಗಪ್ಪ ಮಡನಳ್ಳಿ ಅವರ ಮುಖಾಂತರ ಫರಹತಾಬಾದ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ. ತನಿಖೆ ನಡೆದಿದೆ.

# 22 ರಂದು ದಶವರ್ಣ ಕಲಾವಿದರಿಂದ ಚಿತ್ರಕಲಾ ಪ್ರದರ್ಶನ




ಕಲಬುರಗಿ: ನಾಡಿನ ಸಾಂಸ್ಕೃತಿಕ ಶ್ರೀಮಂತಿಕೆಗೆ ಚಿತ್ರಕಲಾವಿದರ ಪಾತ್ರ ತುಂಬಾ ಹಿರಿದು. ಜೀವನದ ಕೆಲ ಘಟನೆ ಹಾಗೂ ವಿಸ್ಮಯಗಳನ್ನು ತಮ್ಮ ಕಲಾ ಕುಂಚದಲ್ಲಿ ಅರಳಿಸುವ ಕಲೆ ಚಿತ್ರಕಲಾವಿದರದು. ಒಂದು ಕತೆಯ ಸಾರವನ್ನು ಕೇವಲ ಚಿತ್ರದ ಮೂಲಕ ಸೆರೆ ಹಿಡಿಯಬಲ್ಲ ಮಾಂತ್ರಿಕ ಶಕ್ತಿ ಹೊಂದಿರುತ್ತಾನೆ. ಇಂಥ ಚಿತ್ರಕಲಾವಿದ–ರಿಗೆ ವೇದಿಕೆಯ ಅವಕಾಶಗಳು ಬೇಕಾಗಿವೆ. ಈ ದಿಸೆಯಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಈ ಭಾಗದ ಕಲಾವಿದ–ರಿಗೆ ಪ್ರೋತ್ಸಾಹ ನೀಡಲು ಮುಂದಾಗಿದೆ. ಜಿಲ್ಲೆಯಲ್ಲಿ ಕಲಾವಿದರ ದೈತ್ಯ ಪ್ರತಿಭೆಗಳು ಕಾಣುತ್ತೇವೆ. ಅವರಿಗೆ ಸಾರ್ವತ್ರಿಕವಾಗಿ ಅವಕಾಶ ಕಲ್ಪಿಸಿ ಕೊಡುವ ಮೂಲಕ ಚಿತ್ರಕಲಾವಿದರನ್ನು ಬೆಳೆಸಬೇಕಾಗಿದೆ. ಕನ್ನಡ ಸಾಹಿತ್ಯ ಪರಿಷತ್ತು ಜನಸಾಮಾನ್ಯರ ಪರಿಷತ್ತಾಗಿ ಬೆಳೆಸುವಲ್ಲಿ ಸಂಗೀತಗಾರರು, ಚಿತ್ರಕಲಾವಿದರು, ಜನಪದ ಕಲಾವಿದರು ಅವಶ್ಯವಾಗಿದ್ದಾರೆ. ಇವರೆಲ್ಲರನ್ನು ಒಂದುಗೂಡಿಸಿ ಪ್ರೋತ್ಸಾಹಿಸುವ ಕಾರ್ಯ ಪರಿಷತ್ತು ಮಾಡುತ್ತಿದೆ. ಬಹುದಿನಗಳ ಬೇಡಿಕೆಯಾಗಿದ್ದ ಕಲಾ ಸೌಧ ನಿರ್ಮಿಸಬೇಕೆಂಬ ಕನಸು ಇದೀಗ ಪರಿಷತ್ತು ಈಡೇರಿಸುತ್ತಿದೆ. ಆ ಮೂಲಕ ಚಿತ್ರಕಲಾವಿದರಿಗೆ ವಿಶೇಷ ಗೌರವ ಕೊಡುವ ಕಾರ್ಯ ಪರಿಷತ್ತು ಮಾಡಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ ತಿಳಿಸಿದರು. ನಗರದ ಕನ್ನಡ ಭವನದಲ್ಲಿ ಶುಕ್ರವಾರ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ವಿವರಣೆ ನೀಡಿದ ತೇಗಲತಿಪ್ಪಿ, ನಗರದ ಕನ್ನಡ ಭವನದ ಬಾಪೂಗೌಡ ದರ್ಶನಾಪೂರ ರಂಗಮಂದಿರದ ಎಡ ಭಾಗದಲ್ಲಿ ನಿರ್ಮಿಸಲ್ಪಟ್ಟಿರುವ ಕಲಾ ಸೌಧ ದ ಉದ್ಘಾಟನಾ ಸಮಾರಂಭವನ್ನು ಅ.22 ರಂದು ಬೆಳಗ್ಗೆ 10.45ಕ್ಕೆ ಆಯೋಜಿಸಲಾಗಿದೆ. ಜತೆಗೆ ಒಂದು ವಾರದವರೆಗೆ ಜಿಲ್ಲೆಯ ವಿವಿಧ ಚಿತ್ರಕಲಾವಿದರ ದಶವರ್ಣ ಕಲಾವಿದರಿಂದ ಚಿತ್ರಕಲಾ ಪ್ರದರ್ಶನವೂ ಸಹ ರೂಪಿಸಲಾಗಿದೆ. ಚಿತ್ರಕಲೆ, ಸಂಗೀತ, ಜನಪದ ಹೀಗೆ ಎಲ್ಲಾ ಪ್ರಕಾರದ ಸಾಹಿತಿಗಳನ್ನೊಳಗೊಂಡಿದ್ದರೆ ಮಾತ್ರ ಪರಿಷತ್ತಿನ ಕಾರ್ಯಕ್ರಮಗಳು ಪೂರ್ಣಗೊಳ್ಳುತ್ತವೆ ಎಂಬ ಭಾವನೆ ನಮ್ಮದ್ದಾಗಿದೆ ಎಂದು ವಿವರಿಸಿದರು.

ಕಲ್ಯಾಣ ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಡಾ. ಅಜಯಸಿಂಗ್ ಉದ್ಘಾಟಕರಾಗಿ ಆಗಮಿಸಲಿದ್ದು, ಜಿಲ್ಲಾಧಿಕಾರಿ ಬಿ ಫೌ–ಜಿಯಾ ತರನ್ನುಮ್, ಕರ್ನಾಟಕ ಲಲಿತಕಲಾ ಅಕಾಡೆಮಿಯ ಮಾಜಿ ಅಧ್ಯಕ್ಷ ನಾಡೋಜ ಡಾ. ಜೆ.ಎಸ್. ಖಂಡೇರಾವ, ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಚಿತ್ರಕಲಾವಿದ ಡಾ. ಎ.ಎಸ್. ಪಾಟೀಲ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಕಸಾಪ ಜಿಲ್ಲಾಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ ಅಧ್ಯಕ್ಷತೆ ವಹಿಸಲಿದ್ದಾರೆ. ಜಿಲ್ಲೆಯ ಚಿತ್ರಕಲಾವಿದರಾದ ಬಸವರಾಜ ಉಪ್ಪಿನ, ಡಾ. ಸುಬ್ಬಯ್ಯಾ ನೀಲಾ, ರಾಜಶೇಖರ ಶ್ಯಾಮಣ್ಣ, ಮಹ್ಮದ್ ಅಯಾಜೋದ್ದೀನ್ ಪಟೇಲ್, ರಾಜೇಶ ಸಾಂಗ್ವಿಕರ್, ಡಾ. ರೆಹಮಾನ್ ಪಟೇಲ್, ಡಾ. ಶಾಹೇದ ಪಾಷಾ, ರಾಘವೇಂದ್ರ ಬುರ್ಲಿ, ಶಿವಲೀಲಾ ಉಪ್ಪಿನ, ನಾಗರಾಜ ಕುಂಬಾರ ಅವರಿಂದ ಒಂದು ವಾರದ ವರೆಗೆ ಚಿತ್ರಕಲಾ ಪ್ರದರ್ಶನ ನಡೆಯಲಿದೆ ಎಂದು ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಶಿವರಾಜ ಅಂಡಗಿ, ಧರ್ಮಣ್ಣ ಎಚ್ ಧನ್ನಿ, ಶರಣ–ರಾಜ ಛಪ್ಪರಬಂದಿ, ಕಲಾ ಸೌಧ ದ ಸಂಚಾಲಕ ಡಾ. ರೆಹಮಾನ್ ಪಟೇಲ್, ರವೀಂದ್ರಕುಮಾರ ಭಂಟನಳ್ಳಿ,ಧರ್ಮರಾಜ ಜವಳಿ, ಸಂತೋಷ ಕುಡಳ್ಳಿ, ಪ್ರಭುಲಿಂಗ ಮೂಲಗೆ, ಶಾಮಸುಂದರ ಕುಲಕರ್ಣಿ, ಸಿದ್ಧಲಿಂಗ ಬಾಳಿ ಇತರರಿದ್ದರು.ಕಸಾಪ ದ ವಿವಿಧ ತಾಲೂಕಾ ಘಟಕಗಳ ಆಶ್ರಯದಲ್ಲಿ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ನವೆಂಬರ್ ಹಾಗೂ ಡಿಸೆಂಬರ್ ತಿಂಗಳಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನಗಳನ್ನು ಆಯಾ ತಾಲೂಕಾಧ್ಯಕ್ಷರು ಸ್ಥಳೀಯ ಸಂಪನ್ಮೂಲಗಳನ್ನು ಬಳಸಿಕೊಂಡು ನಡೆಸಲು ಈಗಾಗಲೇ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ.

ವಿಜಯಕುಮಾರ ಪಾಟೀಲ ತೇಗಲತಿಪ್ಪಿ

# 12ನೇ ರಾಜ್ಯ ಮಟ್ಟದ ಕದಳಿ ಮಹಿಳಾ ಸಮಾವೇಶ:ಸಮ್ಮೇಳನಾಧ್ಯಕ್ಷರಾಗಿ ಡಾ. ಮೀನಾಕ್ಷಿ ಬಾಳಿ ಆಯ್ಕೆ



ಕಲಬುರಗಿ: ಇದೇ ಅಕ್ಟೋಬರ್ 26 ಮತ್ತು 27ರಂದು ಎರಡು ದಿನಗಳ ಕಾಲ 12ನೇ ರಾಜ್ಯಮಟ್ಟದ ಕದಳಿ ಮಹಿಳಾ ಸಮಾವೇಶ ನಗರದ ಜೈ ಭವಾನಿ ಕನ್ವೆನ್ಷನ್ ಸಭಾಮಂಟಪದಲ್ಲಿ ಜರುಗಲಿದ್ದು, ಸಾಹಿತಿ ಶರಣ ಚಿಂತಕಿ ಡಾ. ಮೀನಾಕ್ಷಿ ಬಾಳಿ ಅವರಿಗೆ ಸಮ್ಮೇಳನಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ ಎಂದು ಕದಳಿ ಮಹಿಳಾ ವೇದಿಕೆಯ ಜಿಲ್ಲಾಧ್ಯಕ್ಷೆ ಡಾ. ಶಾಂತಾ ಬಿ. ಅಷ್ಟಗಿ ಅವರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಕದಳಿ ಮಹಿಳಾ ವೇದಿಕೆ ಮತ್ತು ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು, ಕದಳಿ ಮಹಿಳಾ ವೇದಿಕೆ ಜಿಲ್ಲಾ ಘಟಕದ ವತಿಯಿಂದ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದರು.

ಅಕ್ಟೋಬರ್ 26ರಂದು ಬೆಳಿಗ್ಗೆ 10 ಗಂಟೆಗೆ ಸಮಾವೇಶವನ್ನು ಶರಣಬಸವೇಶ್ವರ್ ವಿದ್ಯಾವರ್ಧಕ ಸಂಘದ ಚೇರ್ ಪರ್ಸನ್ ಡಾ. ದಾಕ್ಷಾಯಣಿ ಶರಣಸಪ್ಪ ಅಪ್ಪಾ ಅವರು ಉದ್ಘಾಟಿಸುವರು. ಜಗದ್ಗುರು ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು ಹಾಗೂ ಗದಗನ ಜಗದ್ಗುರು ಡಾ. ಸಿದ್ದರಾಮ್ ಮಹಾಸ್ವಾಮಿಗಳು, ಜಗದ್ಗುರು ಡಾ. ಸಾರಂಗದರ್ ದೇಶಿಕೇಂದ್ರ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸುವರು. ಮುಖ್ಯ ಅತಿಥಿಗಳಾಗಿ ರಾಜ್ಯದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯಿತಿರಾಜ್ ಮತ್ತು ಐಟಿಬಿಟಿ ಮತ್ತು ಜಿಲ್ಲಾ ಉಸ್ತುವಾರಿ ಹಾಗೂ ಕದಳಿ ಸಮಾವೇಶದ ಸ್ವಾಗತ ಸಮಿತಿ ಅಧ್ಯಕ್ಷ ಪ್ರಿಯಾಂಕ್ ಖರ್ಗೆ ಅವರು ಭಾಗವಹಿಸುವರು ಎಂದು ಅವರು ಹೇಳಿದರು.

ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವ ಶರಣಬಸಪ್ಪ ದರ್ಶನಾಪುರ ಅವರು ಕಲ್ಯಾಣ ಕದಳಿ ಸಮಾವೇಶದ ಸ್ಮರಣ ಸಂಚಿಕೆ ಬಿಡುಗಡೆ ಮಾಡಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳಕರ್ ಅವರು ಅಕ್ಕ ಕೇಳವ್ವ ಗ್ರಂಥ ಲೋಕಾರ್ಪಣೆ ಮಾಡಲಿದ್ದಾರೆ. ಗ್ರಾಮೀಣ ಮತಕ್ಷೇತ್ರದ ಶಾಸಕ ಬಸವರಾಜ್ ಮತ್ತಿಮೂಡ್ ಅವರು ಮಹಾದಾಸೋಹಿ" ಕೃತಿ ಲೋಕಾರ್ಪಣೆಗೊಳಿಸಲಿದ್ದಾರೆ. 63 ಪುರಾತನ ಚಿತ್ರ ಪುಟಗಳ ಗ್ರಂಥವನ್ನು ವಿಧಾನ ಪರಿಷತ್ ಸದಸ್ಯ ಬಿ.ಜಿ. ಪಾಟೀಲ್ ಅವರು ಬಿಡುಗಡೆ ಮಾಡುವರು ಎಂದು ಅವರು ತಿಳಿಸಿದರು.

ಸಮಾವೇಶದ ಸರ್ವಾಧ್ಯಕ್ಷೆ ಡಾ. ಮೀನಾಕ್ಷಿ ಬಾಳಿ, ನಿಕಟಪೂರ್ವ ಅಧ್ಯಕ್ಷೆ ಶ್ರೀಮತಿ ಶಶಿಕಲಾ ವಸ್ತ್ರದ್ ಅವರು ಸಮಾವೇಶದಲ್ಲಿ ಉಪಸ್ಥಿತರಿರುವರು. ಅಧ್ಯಕ್ಷತೆಯನ್ನು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ರಾಜ್ಯಾಧ್ಯಕ್ಷ ಡಾ. ಸಿ. ಸೋಮಶೇಖರ್ ಅವರು ವಹಿಸುವರು. ಅಫಜಲಪುರ ಶಾಸಕ ಶಾಸಕ ಎಂ.ವೈ. ಪಾಟೀಲ್, ಜಿಲ್ಲಾಧಿಕಾರಿ ಬಿ., ಫೌಜಿಯಾ ತರನ್ನುಮ್, ಮಾಜಿ ಶಾಸಕ ದೊಡ್ಡಪ್ಪಗೌಡ ಪಾಟೀಲ್ ನರಿಬೋಳ್, ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಪ್ರಭುಲಿಂಗ್ ಮಹಾಗಾಂಕರ್ ಅವರೂ ಸೇ–ರಿದಂತೆ ಹಲವಾರು ಗಣ್ಯರು ಗೌರವ ಉಪಸ್ಥಿತಿ ವಹಿಸಲಿದ್ದಾರೆ ಎಂದು ಅವರು ಹೇಳಿದರು.

ಸಮಾವೇಶದ ಅಂಗವಾಗಿ ಎರಡು ದಿನಗಳ ಕಾಲ ನಿರಂತರವಾಗಿ ನಾಲ್ಕು ಗೋಷ್ಠಿ ನಡೆಯಲಿದ್ದು, ನಾಡಿನ ವಿದ್ವಾಂಸರಿಂದ ವಿವಿಧ ವಿಷಯಗಳು ಮಂಡನೆ ಮಾಡಲಿದ್ದಾರೆ. ಅಕ್ಟೋಬರ್ 27ರಂದು ಸಮಾರೋಪ ಸಮಾರಂಭ ಜರುಗಲಿದೆ. ಜಗದ್ಗುರು ಶಿವರಾತ್ರಿ ದೇಶಿಕಂದ್ರ ಮಹಾಸ್ವಾಮಿಗಳು, ಜಗದ್ಗುರು ಸಿದ್ದರಾಮ್ ಮಹಾಸ್ವಾಮಿಗಳು, ನಾಡೋಜ್ ಡಾ. ಬಸವಲಿಂಗ ಪಟ್ಟದ್ದೇವರು ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಸಮಾರೋಪ ನುಡಿಗಳನ್ನು ಬೀದರಿನ ಅಕ್ಕ ಗಂಗಾಂಬಿಕಾ ಆಡಲಿದ್ದಾರೆ. ಡಾ. ಸಿ. ಸೋಮಶೇಖರ್ ಅವರು ಗೌರವ ಉಪಸ್ಥಿತರಿರಲಿದ್ದಾರೆ ಎಂದು ಅವರು ತಿಳಿಸಿದರು.

ರಾಜ್ಯದ ಜೀವಶಾಸ್ತ್ರ ಮತ್ತು ಪರಿಸರ ವಿಜ್ಞಾನ ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಅವರು ಮೀನಾಕ್ಷಿ ಬಾಳಿಯವರು ರಚಿಸಿದ ವಚನ ನಿಜ ದರ್ಶನ ಕೃತಿ ಲೋಕಾರ್ಪಣೆ ಮಾಡಲಿದ್ದಾರೆ. ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್ ಅವರು ಡಾ. ತಿಪ್ಪೇರುದ್ರಸ್ವಾಮಿ ಅವರು ರಚಿಸಿದ ಜಡದಲ್ಲಿ ಜಂಗಮ ಕೃತಿ ಲೋಕಾರ್ಪಣೆ ಮಾಡುವರು ಎಂದು ಅವರು ಹೇಳಿದರು.

ಮುಖ್ಯಮಂತ್ರಿಗಳ ಸಲಹೆಗಾರ ಹಾಗೂ ಆಳಂದ್ ಶಾಸಕ ಬಿ.ಆರ್ ಪಾಟೀಲ್, ಬಸವಕಲ್ಯಾಣ ಶಾಸಕ ಶರಣು ಸಲಗರ್, ವಿಧಾನಪರಿಷತ್ ಸದಸ್ಯರಾದ ಶಶೀಲ್ ಜಿ. ನಮೋಶಿ, ತಿಪ್ಪಣ್ಣಪ್ಪ ಕಮಕನೂರ್, ಜಗದೇವ ಗುತ್ತೇದಾರ್, ಚಂದ್ರಶೇಖರ್ ಪಾಟೀಲ್, ಮಾಜಿ ಶಾಸಕರಾದ ದತ್ತಾತ್ರೇಯ್ ಪಾಟೀಲ್, ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ, ಮುಖಂಡರಾದ ನಿತಿನ್ ಗುತ್ತೇದಾರ್, ಶರಣು ಮೋದಿ, ಸೋಮಶೇಖರ್ ಗೋನಾಯಕ್, ಬಸವರಾಜ್ ಪಾಟೀಲ್ ಸೋಮನಹಳ್ಳಿ, ಗೌರವಾಧ್ಯಕ್ಷ ಕುಪೇಂದ್ರ ಪಾಟೀಲ್, ಯುವ ಘಟಕದ ಅಧ್ಯಕ್ಷ ಪ್ರಕಾಶ್ ಅಂಗಡಿ ಮುಂತಾದವರು ಉಪಸ್ಥಿತರಿರಲಿದ್ದು ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಂಕರ್ ದೇವನೂರ್ ಅವರು ವಹಿಸಲಿದ್ದಾರೆ ಎಂದು ಅವರು ತಿಳಿಸಿದರು.

ಜಯನಗರದ ಅನುಭವ ಮಂಟಪ ಮಾರ್ಗವಾಗಿ ಸರ್ಕಾರಿ ಮಹಾವಿದ್ಯಾಲಯದಿಂದ ಜೈ ಭವಾನಿ ಕನ್ವೆನ್ಷನ್ ಹಾವರೆಗೆ ಅಕ್ಕಮಹಾದೇವಿ ಭಾವಚಿತ್ರ ಹಾಗೂ ವಚನ ಸಾಹಿತ್ಯ ಗ್ರಂಥ–'ಗಳ ಮೆರವಣಿಗೆ ಜರುಗಲಿದೆ. ಬಸವ ಸಮಿತಿ ಅಧ್ಯಕ್ಷೆ ಡಾ. ವಿಲಾಸವತಿ ಖುಬಾ ಅವರು ಉದ್ಘಾಟಿಸಲಿದ್ದಾರೆ. ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಮನಿ ಮತ್ತು ದಕ್ಷಿಣ ಮತಕ್ಷೇತ್ರ ಶಾಸಕ ಅಲ್ಲಮಪ್ರಭು ಪಾಟೀಲ್ ಅವರೂ ಸೇರಿದಂತೆ ಮೆರವಣಿಗೆಯಲ್ಲಿ ಹಲವಾರು ಬಸವ ಪರ ಸಂಘಟನೆಗಳ ಕಾರ್ಯಕರ್ತರು ಭಾಗವಹಿಸುವರು ಎಂದು ಅವರು ಹೇಳಿದರು.

ಇದೇ ಸಂದರ್ಭದಲ್ಲಿ ಸಮ್ಮೇಳನದ ಸಭಾಂಗಣದ ಮುಂಭಾಗದಲ್ಲಿ ವಚನ ಕಲಾಕೃತಿಗಳ ಕಲಾ ಪ್ರದರ್ಶನ ಮತ್ತು ಪುಸ್ತಕಗಳು ಮಳಿಗಳನ್ನು ಏರ್ಪಡಿಸಲಾಗಿದೆ. ವೈದ್ಯಕೀಯ ಹಾಗೂ ಕೌಶಲ್ಯಾಭಿವೃದ್ಧಿ ಅಭಿವೃದ್ಧಿ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಅವರು ಉದ್ಘಾಟಿಸಲಿದ್ದು, ಉತ್ತರ ಮತಕ್ಷೇತ್ರದ ಶಾಸಕಿ ಕನಿಜಾ ಫಾತಿಮಾ ಮುಂತಾದವರು ಪಾಲ್ಗೊಳ್ಳುವರು. ಎರಡು ದಿನ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಕಲಾ ತಂಡಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನೆರವೇರಲಿದೆ. ಎಂದು ಅವರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಅಪ್ಪಾರಾವ ಅಕ್ಕೋಣಿ, ಜಿಲ್ಲಾಧ್ಯಕ್ಷ ಡಾ. ಮಲ್ಲಿಕಾರ್ಜುನ್ ವಡ್ಡನಕೇರಿ, ಶಾಂತಲಿಂಗ್ ಪಾಟೀಲ್ ಕೋಳಕೂರ್, ಶಿವಾನಂದ್ ಮಠಪತಿ, ಆನಂದರಾಜ್ ಪಾಟೀಲ್, ವಿಶ್ವನಾಥ್ ಮಂಗಲಗಿ, ಸಿದ್ರಾಮಪ್ಪ ಧುಲಂಗೆ, ಅಂಬಾರಾಯ್ ಬಿರಾದಾರ್, ಬಸವರಾಜ್ ಮೊರಬದ್, ಬಸವರಾಜ್ ಚಾಂದಕವಟೆ, ಗಣಪತಿ ಸಿಂಧೆ, ಜಯಶ್ರೀ ಚಟ್ನಳ್ಳಿ, ಶಿವಕುಮಾರ್ ಬಿದರಿ, ಶರಣಗೌಡ ಪಾಟೀಲ್ ಪಾಳಾ ಮುಂತಾದವರು ಉಪಸ್ಥಿತರಿದ್ದರು.

# ಇಂದಿರಾ ನಗರದಲ್ಲಿ ಶೆಡ್‌ಗಳ ತೆರವು ಕಾರ್ಯಾಚರಣೆ



■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಪಟ್ಟಣದ ಇಂದಿರಾನಗರದ ಶಿರೋಳ ರಸ್ತೆಯಲ್ಲಿರುವ ಕೊಳಚೆ ಮಂಡಳಿಯವರು ನೀಡಿದ್ದರು ಎನ್ನಲಾದ ಜಾಗೆಯಲ್ಲಿನ ಶಡ್‌ಗಳನ್ನು ಪುರಸಭೆಯವರು ಶುಕ್ರವಾರ ತೆರವುಗೊಳಿಸಿದರು.

ಕಳೆದ ಕೆಲವು ದಿನಗಳ ಹಿಂದೆ ಇಲ್ಲಿರುವ ಶಡ್‌ಗಳನ್ನು ತೆರವುಗೊಳಿಸುವದಾಗಿ ಪುರಸಭೆಯವರು ತಿಳಿಸಿದ್ದರು. ಈ ಬಗ್ಗೆ ಕೆಲವರು ಕೊಳಚೆ ಮಂಡಳಿಯವರು ಮತ್ತು ಪುರಸಭೆಯವರು ಜಂಟಿಯಾಗಿ ಸರ್ವೆ ಮಾಡಿ ಈ ಜಾಗೆಯನ್ನು ನಮಗೆ ನೀಡಿದ್ದಾರೆ. ನಮಗೆ ಈ ಜಾಗೆಯಿಲ್ಲದೇ ವಾಸ್ತವಕ್ಕೆ ಬೇರೆ ಜಾಗೆಗಳಿಲ್ಲ. ದಯವಿಟ್ಟು ನಮ್ಮ ಮನೆಗಳನ್ನು ತೆವುಗೊಳಿಸಬೇಡಿ ಎಂದು ತಹಶೀಲ್ದಾರರಿಗೆ ಮನವಿ ಸಲ್ಲಿಸಿದ್ದರು. ಇದಾದ ಬಳಿಕ ಪುರಸಭೆ ಸಾಮಾನ್ಯ ಸಭೆಯಲ್ಲಿ ಕೊಳಚೆ ಮಂಡಳಿ ನೀಡಿದ ಜಾಗೆ ಬೇರೆ ಈ ಷಡ್ ನಿರ್ಮಿಸಿದ ಜಾಗೆ ಬೇರೆ. ಇಲ್ಲಿ ಜಾಗೆ ಕೊಡಿಸುವದಾಗಿ ಸುಳ್ಳು ಹೇಳಿ ಬಡವರ ಬಳಿ ಮತ್ತು ನಮ್ಮೂರಿನವರಲ್ಲದವರ ಬಳಿ ಕೆಲವರು ದುಡ್ಡು ಪಡೆದು ಮೋಸ ಮಾಡಿದ್ದಾರೆ ಎಂದು ಪುರಸಭೆ ಸದಸ್ಯ ಹಣಮಂತ ಭೋವಿ ಆರೋಪಿಸಿದ್ದರು. ಸಭೆಯಲ್ಲಿ ಈ ಬಗ್ಗೆ ಗಂಭೀರವಾಗಿ ಚರ್ಚೆಯಾಗಿ ಮತ್ತೊಮ್ಮೆ ಸರ್ವೆ ಮಾಡಿ ಅನಧಿಕೃತವಾಗಿದ್ದರೆ ಶಡ್‌ಗಳನ್ನು ತೆರವುಗೊಳಿಸಬೇಕೆಂದು ಶಾಸಕ ಸಿ.ಎಸ್.ನಾಡಗೌಡರು ಆದೇಶಿಸಿದ್ದರು. ಈ ಬಗ್ಗೆ ತಿಳಿದ ಕೊಳಚೆ ಮಂಡಳಿಯ ಹಕ್ಕುಪತ್ರ ಹೊಂದಿದ್ದ ಕೆಲ ಫಲಾನುಭವಿಗಳು ಕಲ್ಬುರ್ಗಿಯ ಉಚ್ಚನ್ಯಾಯಾಲಯದ ಮೊರೆ ಹೋಗಿದ್ದರು. ಈ ಎಲ್ಲ ಬೆಳವಣಿಗೆಗಳ ಬಳಿಕ ಇಂದು ಜೆಸಿಬಿಯಿಂದ ಎಲ್ಲ ಶಡ್‌ಗಳನ್ನು ತೆರವುಗೊಳಿಸಲಾಗಿದೆ.

ಈ ವೇಳೆ ಮಾಧ್ಯಮದವರೊಂದಿಗೆ ಪುರಸಭೆ ಅಧ್ಯಕ್ಷ ಮಹೆಬೂಬ ಗೊಳಸಂಗಿ ಮಾತನಾಡಿ ಹಲವು ವರ್ಷಗಳ ಹಿಂದೆ ಈ ಜಾಗೆಯನ್ನು ಮದರಿ ಎನ್ನುವವರಿಗೆ ಲೀಸ್ ನೀಡಲಾಗಿತ್ತು. ಅವರ ಅವಧಿಯ ಬಳಿಕ ತಮ್ಮ ಬೆಲೆ ಬಾಳುವ ಸಾಮಾನುಗಳನ್ನು ತೆಗೆದುಕೊಳ್ಳಲು ಕಾಲಾವಕಾಶ ಕೋರಿ ಕೋರ್ಟ ನ ಮೊರೆ ಹೋಗಿದ್ದರು. ಕಳೆದ ಕೆಲವು ದಿನಗಳ ಹಿಂದೆ ತಮ್ಮ ವಯಕ್ತಿಕ ಕಾರಣದಿಂದ ಅವರು ಜೈಲಿನಲ್ಲಿದ್ದು ಅವರ ಮಶಿನರಿ ಸಾಮಾನುಗಳನ್ನು ದೂರ ಸರಿಸಿ ಈ ಜಾಗೆಯಲ್ಲಿ ಶಡ್ ಹೊಡೆದುಕೊಂಡು ಇಪ್ಪತ್ತು ವರ್ಷದಿಂದ ನಾವು ಇದೇ ಶಡ್ ನಲ್ಲಿದ್ದೇವೆ ನಮ್ಮನ್ನು ತೆರವುಗೊಳಿಸಬೇಡಿ ಎಂದು ಮನವಿ ಸಲ್ಲಿಸಿದ್ದರು. ಈ ಬಗ್ಗೆ ನಾವು 6 ಜನರ ಸದಸ್ಯರು ಮತ್ತು ನಾಮನಿರ್ದೇಶಿತ ಸದಸ್ಯರ ತಂಡ ರಚಿಸಿ ಜಾಗೆಯಲ್ಲಿ ಬಂದು ಪರಿಶೀಲಿಸಿ ನೋಡಲಾಗಿ ಯಾರೊಬ್ಬರೂ ಇಲ್ಲಿ ವಾಸವಿಲ್ಲದ್ದು ಕಂಡು ಬಂದಿದೆ. ಕೊಳಚೆ ಮಂಡಳಿ ನೀಡಿದ ಹಕ್ಕು ಪತ್ರದಲ್ಲಿನ ಫೋಟೋಗೂ ಜಾಗೆಗೂ ಯಾವುದೇ ಸಂಬಂಧವಿಲ್ಲ. ಹಾಗಾಗಿ ನಾವೇ ಸ್ವತಃ ನಿಂತು ಈ ಶಡ್‌ಗಳನ್ನು ತೆರವುಗೊಳಿಸುತ್ತಿದ್ದೇವೆ ಎಂದು ಸ್ಪಷ್ಟಪಡಿಸಿದರು.

# ತೆರವುಗೊಳಿಸಿದ ಶೆಡ್ ಕುಟುಂಬಗಳಿಗೆ ಪರಿಹಾರ ಕೋರಿ ಪ್ರತಿಭಟನೆ




■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಪಟ್ಟಣದ ಇಂದಿರಾ ನಗರ ಬಡಾವಣೆಯಲ್ಲಿ ತೆರವುಗೊಳಿಸಲಾದ ಶೆಡ್ ನ ನೊಂದ ದಲಿತ ಕುಟುಂಬಗಳಿಗೆ ಪರಿಹಾರ ಒದಗಿಸಬೇಕು ಎಂದು ಒತ್ತಾಯಿಸಿ ನಗರದ ಎಸ್‌ಸಿ-ಎಸ್‌ಟಿ ಹಾಗೂ ವಿವಿಧ ದಲಿತಪರ ಸಂಘಟನೆಗಳ ವತಿಯಿಂದ ಪಟ್ಟಣದಲ್ಲಿ ಶನಿವಾರ ಬೃಹತ್ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳಿಗೆ ತಾಲೂಕು ದಂಡಾಧಿಕಾರಿಗಳ ಮೂಲಕ ಶನಿವಾರ ಮನವಿ ಪತ್ರ ಸಲ್ಲಿಸಲಾಯಿತು.

ತೆರವು ಜಾಗೆಯಿಂದ ಶುರುವಾದ ಪ್ರತಿಭಟನೆ ಪಟ್ಟಣದ ತಂಗಡಗಿ ಮುಖ್ಯರಸ್ತೆ, ಬಸವೇಶ್ವರ ವೃತ್ತ, ಕಿತ್ತೂರು ರಾಣಿ ಚನ್ನಮ್ಮ ವೃತ್ತ ಮಾರ್ಗವಾಗಿ ತಹಶೀಲ್ದಾರ ಕಚೇರಿಯವರೆಗೆ ಸಾಗಿತು. ಅಲ್ಲಿ ನಡೆದ ಬಹಿರಂಗ ಸಭೆಯಲ್ಲಿ ಡಿಎಸ್‌ಎಸ್ ಮುಖಂಡ ಹರೀಶ ನಾಟೀಕಾರ ಮಾತನಾಡಿ, ದುಡಿದು ತಿನ್ನುವ ನಮ್ಮ ಜನರ ಮನೆಗಳನ್ನು ನೆಲಸಮ ಮಾಡಲಾಗಿದೆ ಈ ಘಟನೆಯನ್ನು ನಮ್ಮ ಸಂಘಟನೆ ಖಂಡಿಸುತ್ತದೆ. ನಿವಾಸಿಗಳ ಬಳಿ ಕೊಳಚೆ ಮಂಡಳಿ ನೀಡಿದ ಹಕ್ಕುಪತ್ರ, ನ್ಯಾಯಾಲಯದ ಸ್ಟೇ ಪ್ರತಿ ಇದ್ದರೂ ಕೂಡ ಯಾವುದನ್ನೂ ಲೆಕ್ಕಿಸಿಲ್ಲ. ಹುಡ್ಕೋ ಗೇಟ್ ಬಳಿ ಇರುವ ಬೆಂಗಳೂರು ಬೇಕರಿ ಕಿತ್ತದೇ ನಮ್ಮವರ ಮನೆಗಳನ್ನು ಕಿತ್ತಿದ ಇವರ ನಡವಳಿಕೆ ಎಸ್‌ಸಿ-ಎಸ್‌ಟಿ ಜನಾಂಗದ ಮೇಲೆ ದಬ್ಬಾಳಿಕೆ ನಡೆಸುತ್ತಿರುವ ಬಗ್ಗೆ ತೋರಿಸಿ ಕೊಡುತ್ತಿದೆ. ಕೂಡಲೇ ತೆರವುಗೊಳಿಸಿದ ಎಲ್ಲ ನೊಂದ ಕುಟುಂಬಗಳಿಗೆ ಪರಿಹಾರವನ್ನು ಘೋಶಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸುವದಾಗಿ ಎಚ್ಚರಿಸಿದರು.

ನೆಲಸಮ ಮಾಡಲಾದ ಶೆಡ್ ಮನೆಗಳ 35ಕುಟುಂಬಗಳಿಗೆ ತಲಾ 3ಲಕ್ಷ ಪರಿಹಾರ ಧನ ವಿತರಿಸಬೇಕು. ನ್ಯಾಯಾಂಗ ನಿಂದನೆ ಮಾಡಿರುವ ಪುರಸಭೆ ಅಧ್ಯಕ್ಷ ಹಾಗೂ ಮುಖ್ಯಾಧಿಕಾರಿಯ ಮೇಲೆ ನ್ಯಾಯಾಂಗ ನಿಂದನೆ ಮತ್ತು ಎಸ್‌ಸಿಎಸ್‌ಟಿ ಕೇಸು ದಾಖಲಿಸಬೇಕು ಎಂದು ಮನವಿ ಪತ್ರದಲ್ಲಿ ಒತ್ತಾಯಿಸಲಾಗಿದೆ.

ಇದೇ ವೇಳೆ ಡಿಎಸ್‌ಎಸ್ ನ ಹಿರಿಯ ಮುಖಂಡ ಡಿ.ಬಿ.ಮುದೂರ, ಪ್ರಮುಖರಾದ ಪ್ರಕಾಶ ಸರೂರ, ದೇವರಾಜ ಹಂಗರಗಿ ಮತ್ತೀತರರು ಮಾತನಾಡಿ ಘಟನೆಯನ್ನು ಖಂಡಿಸಿದರು. ತಹಸೀಲ್ದಾರ ಬಲರಾಮ ಕಟ್ಟಿಮನಿ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಈ ವೇಳೆ ಪುರಸಭೆ ಸದಸ್ಯ ಶಿವಪ್ಪ ಶಿವಪೂರ, ಪರಶುರಾಮ ನಾಲತವಾಡ, ಪರಶುರಾಮ ಮುರಾಳ, ಬಲಭೀಮ ನಾಯಕಮಕ್ಕಳ, ಶೇಕು ಆಲೂರ ಸೇರಿದಂತೆ ಹಲವರು ಇದ್ದರು.

## ರಾಜ್ಯೋತ್ಸವ: ಸಾಧಕರಿಗೆ ಸನ್ಮಾನಕ್ಕೆ ಅರ್ಜಿ ಆಹ್ವಾನ


■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಪ್ರಸಕ್ತ ಸಾಲಿನ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಅನನ್ಯ ಸೇವೆ ಸಲ್ಲಿಸಿರುವ ಸಾಧಕರನ್ನು ಸನ್ಮಾನಿಸಲಾಗುತ್ತಿದ್ದು, ಜಿಲ್ಲೆಯ ಸಾಧಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಕಲೆ, ಸಾಹಿತ್ಯ, ರಂಗಭೂಮಿ, ಸುಗಮ ಸಂಗೀತ, ಜನಪದ ಸಂಗೀತ, ಶಿಲ್ಪಕಲೆ, ನೃತ್ಯ, ಚಿತ್ರಕಲೆ, ಸಮಾಜ ಸೇವೆ, ಕೃಷಿ, ವೈದ್ಯಕೀಯ, ಪತ್ರಿಕೋದ್ಯಮ, ಸಂಕೀರ್ಣ, ಇತರೆ ಕ್ಷೇತ್ರಗಳಲ್ಲಿ ತಮ್ಮ ಸಾಧನೆಯ ವಿವರಗಳನ್ನೊಳಗೊಂಡಂತೆ ಸ್ವ-ಪರಿಚಯ ಮತ್ತು ದಾಖಲೆಗಳೊಂದಿಗೆ ದಿನಾಂಕ: 25-10-2024ರಂದು ಸಂಜೆ 5 ಗಂಟೆಯೊಳಗಾಗಿ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರ, ಸ್ಟೇಶನ್ ರಸ್ತೆ, ವಿಜಯಪುರ ಕಚೇರಿಗೆ ಸಲ್ಲಿಸಬಹುದಾಗಿದೆ. ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ ಸಂಖ್ಯೆ: 08352-251261 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚಡಚಣ ಸಮುದಾಯ ಆರೋಗ್ಯ ಕೇಂದ್ರ ಮೇಲ್ದರ್ಜೆಗೆ : ಕಟಕದೊಂಡ

■ ಉದಯರಶ್ಮಿ ದಿನಪತ್ರಿಕೆ




ಚಡಚಣ: ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರವು ರೋಗಿಗಳ ಸೇವೆಯನ್ನು ಉತ್ತಮವಾಗಿ ನಿರ್ವಹಿಸುತ್ತಿದ್ದು, ಇದನ್ನು ಬೇಗನೆ ತಾಲೂಕು ಆಸ್ಪತ್ರೆಯಾಗಿ ಮೇಲ್ದರ್ಜೆಗೇರಿಸಲಾಗುವುದು. ಡಯಾಲಿಸಿಸ್ ಕೇಂದ್ರವು ಬಡವರಿಗೆ ಅನುಕೂಲವಾಗಿದ್ದು, 24 ಗಂಟೆಗಳ ಸೇವೆ ನೀಡಲಾಗುವುದು ಎಂದು ಶಾಸಕ ವಿಠ್ಠಲ ಕಟಕಧೊಂಡ ಹೇಳಿದರು.

ಸಮುದಾಯ ಆರೋಗ್ಯ ಕೇಂದ್ರದಲ್ಲಿ ಫಂಗಸ್ ಚಿಕಿತ್ಸೆ ಹಾಗೂ ಡಯಾಲಿಸಿಸ್ ಕೇಂದ್ರವನ್ನು ಉದ್ಘಾಟಿಸಿ ಮಾತನಾಡುತ್ತ, ಪಟ್ಟಣಕ್ಕೆ ಹದಿನಾರುವರೆ ಕೋಟಿ ವೆಚ್ಚದಲ್ಲಿ ಮಿನಿ ವಿಧಾನಸೌಧವು ನಿರ್ಮಾಣವಾಗುವುದು. ಈಗಾಗಲೇ ಎಂಟುವರೆ ಕೋಟಿ ಹಣ ಬಿಡುಗಡೆಯಾಗಿದ್ದು, ಬೇಗನೆ ಕಾಮಗಾರಿ ಪ್ರಾರಂಭಿಸಲಾಗುವುದು. ಪಟ್ಟಣದ ಮೂಲಭೂತ ಸೌಕರ್ಯದ ಅಭಿವೃದ್ಧಿಗೆ ಶ್ರಮಿಸುವೆನು. ವೈದ್ಯರು ರೋಗಿಗಳನ್ನು ದೇವರಂತೆ ಕಂಡು ಚಿಕಿತ್ಸೆ ನೀಡಬೇಕು ಎಂದರು.

ಚಡಚಣ ಏತ ನೀರಾವರಿ ಯೋಜನೆ ಬೇಗನೆ ಪ್ರಾರಂಭಿಸಲಾಗಿ 4 ತಿಂಗಳಲ್ಲಿ ನೀರು ಬರುವಂತೆ ಮಾಡಿ ರೈತರಿಗೆ ಅನುಕೂಲ ಕಲ್ಪಿಸುವೆ. ಇಲ್ಲಿ ವೈದ್ಯರ ಕೊರತೆಯಿದ್ದು ತಜ್ಞ ವೈದ್ಯರನ್ನು ನೇಮಕ ಮಾಡಲಾಗುವುದು. ಸಿಬ್ಬಂದಿಯ ಕೊರತೆಯನ್ನು ನಿವಾರಿಸಿ ಸಾರ್ವಜನಿಕರಿಗೆ ಅನುಕೂಲ ಮಾಡುವೆನು. ಯಾವುದೇ ದೂರು ಬರದಂತೆ ಕಾರ್ಯ ನಿರ್ವಹಿಸಿರಿ ಎಂದು ಶಾಸಕ ಕಟಕಧೊಂಡ ಹೇಳಿದರು.

ಪ್ರಾಸ್ತಾವಿಕವಾಗಿ ಜಿಲ್ಲಾ ಕುಟುಂಬ ಇಲಾಖೆಯ ವೈದ್ಯಾಧಿಕಾರಿ ಡಾ॥ ಸಂಪತ್ ಗುಣಾರಿ ಮಾತನಾಡಿ, ಸಮುದಾಯ ಆರೋಗ್ಯ ಕೇಂದ್ರದಲ್ಲಿ ಫಂಗಸ್ ಚಿಕಿತ್ಸೆ ಹಾಗೂ ಡಯಾಲಿಸಿಸ್ ಪೂರ್ಣ ಪ್ರಮಾಣದಲ್ಲಿ ಕಾರ್ಯ ನಿರ್ವಹಿಸುವುದು ಎಂದರು.

ಸಮುದಾಯ ಆರೋಗ್ಯ ಕೇಂದ್ರದ ಆಡಳಿತಾಧಿಕಾರಿ ಡಾ॥ ಲಕ್ಷ್ಮಿಕಾಂತ ಮೋರೆ ಸರ್ವರನ್ನು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡುತ್ತ, ವರ್ಷದ 365 ದಿವಸಗಳ ಸೇವೆ ಮಾಡಲಾಗುವುದು. ಇದಕ್ಕೆ ರಜೆಯಿಲ್ಲ. ಎಲ್ಲರೂ ಇದರ ಪ್ರಯೋಜನ ಪಡೆದುಕೊಂಡು ಗುಣಮುಖರಾಗಿರಿ ಎಂದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಅಪ್ಪಾಸಾಹೇಬ ಇನಾಮದಾರ, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ॥ ಜಾನ್ ಕಟವಟಿ, ಇಂಡಿ ತಾಲೂಕಾ ವೈದ್ಯಾಧಿಕಾರಿ ಡಾ॥ ಅರ್ಚನಾ ಕುಲಕರ್ಣಿ, ತಹಶೀಲದಾರ ಸಂಜಯ ಇಂಗಳೆ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆರ್.ಡಿ.ಹಕ್ಕೆ, ಕಾಂಗ್ರೆಸ್ ಮುಖಂಡ ಶಬ್ಬೀರ ನದಾಫ, ಆಸ್ಪತ್ರೆ ಸಿಬ್ಬಂದಿಗಳಾದ ಬಿ.ಎ ಮೇತ್ರಿ, ಡಾ॥ ಆರ್.ಬಿ.ಲಾಳಸಂಗಿ, ಎಮ್.ಬಿ.ತೇಲಿ, ಎಮ್.ಎಲ್.ಮುಲ್ಲಾ, ಪ್ರಶಾಂತ ಸಾಳುಂಕೆ, ಪ್ರಕಾಶ ಅಂಬಿಗೇರ, ಹಿರೇಕುರುಬರ ಸೇರಿದಂತೆ ನಾಗರಿಕರು ಇದ್ದರು.

# ಉದ್ಯೋಗ ಒದಗಿಸಲು ವೇದಿಕೆಯಾಗುವುದು ಪುಣ್ಯದ ಕಾರ್ಯ: ಹೊರ್ತಿ

■ ಉದಯರಶ್ಮಿ ದಿನಪತ್ರಿಕೆ



## ವಿಜಯಪುರದ ಅರ್ಕಾಟ್ ದರ್ಗಾದಲ್ಲಿ ಉದ್ಯೋಗ ಮೇಳದ ಉದ್ಘಾಟನೆ

ವಿಜಯಪುರ: ಉದ್ಯೋಗ ಒದಗಿಸುವ ವೇದಿಕೆಯಾಗುವುದು ಒಂದು ಪುಣ್ಯದ ಕಾರ್ಯ ಎಂದು ಸಮಾಜ ಸೇವಕ ಅಬ್ದುಲ್ ರಜಾಕ್ ಹೊರ್ತಿ ಹೇಳಿದರು.

ವಿಜಯಪುರದ ಐತಿಹಾಸಿಕ ಹಜರತ್ ಸುಲ್ತಾನ ಸೈಯ್ಯದ್ ಷಹಾ ಅಬ್ದುಲ್ ರೆಹಮಾನ್ ಖಾದ್ರಿ ದರ್ಗಾದ ಆವರಣದಲ್ಲಿ ನಡೆದ ಉದ್ಯೋಗ ಮೇಳಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಉದ್ಯೋಗ ಒದಗಿಸಿದರೆ ಉದ್ಯೋಗ ಪಡೆದ ಕುಟುಂಬವೇ ಉದ್ಧಾರವಾಗುತ್ತದೆ, ಹೀಗಾಗಿ ಉದ್ಯೋಗ ಒದಗಿಸುವ ಉದ್ದೇಶದಿಂದ ಈ ಉದ್ಯೋಗ ಮೇಳ ಆಯೋಜಿಸಿರುವುದು ಸಂತೋಷ ತಂದಿದೆ ಎಂದರು.

ಐತಿಹಾಸಿಕ ಅರ್ಕಾಟ್ ದರ್ಗಾ ಆಧ್ಯಾತ್ಮಿಕತೆ ಹಾಗೂ ಭಾವೈಕ್ಯತೆ ಸಂಗಮ. ದರ್ಗಾ ಉರುಸು ಅಂಗವಾಗಿ ಉದ್ಯೋಗ ಮೇಳ ಆಯೋಜಿಸಿರುವುದು ಅರ್ಥಪೂರ್ಣ ಎಂದರು.

ಸಂಯುಕ್ತ ಕರ್ನಾಟಕ ಮುಖ್ಯ ವರದಿಗಾರ ವಾಸುದೇವ ಹೆರಕಲ್ಲ ಮಾತನಾಡಿ, ಅರ್ಕಾಟ್ ದರ್ಗಾ ದವಾ ಹಾಗೂ ದುವಾ ಹೆಸರುವಾಸಿ. ಉದ್ಯೋಗದಾತರು ಉದ್ಯೋಗಿಯ ಸ್ವಭಾವ, ಹಾವಭಾವ ಎಲ್ಲವನ್ನೂ ವೀಕ್ಷಿಸುತ್ತಾರೆ, ಹೀಗಾಗಿ ಶ್ರೇಷ್ಠ ವ್ಯಕ್ತಿತ್ವ, ಕೌಶಲ್ಯ ರೂಪಿಸಿಕೊಂಡು ಮುನ್ನಡೆಯಬೇಕು ಎಂದರು.

ಸನ್ಮಾನ ಸ್ವೀಕರಿಸಿ ಕರ್ನಾಟಕ ಮಾಧ್ಯಮ ಅಕಾಡೆಮಿ ಸದಸ್ಯರಾಗಿ ಆಯ್ಕೆಯಾದ ವಿಜಯಪುರ ಜಿಲ್ಲಾ ಕಾನಿಪ ಜಿಲ್ಲಾಧ್ಯಕ್ಷ ಸಂಗಮೇಶ ಚೂರಿ ಮಾತನಾಡಿ, ಭಾವೈಕ್ಯತೆ ಕ್ಷೇತ್ರವಾಗಿರುವ ದರ್ಗಾದಲ್ಲಿ ಉದ್ಯೋಗ ಮೇಳ ಆಯೋಜಿಸಿರುವುದು ಸಂತೋಷ ತಂದಿದೆ, ಗಡಿಯಾರ ನೋಡಿ ಕೆಲಸ ಮಾಡುವ ಮನೋಭಾವದಿಂದ ದೂರವಿದ್ದು ಸಮರ್ಪಣಾ ಮನೋಭಾವದಿಂದ ದುಡಿಯುವ ಮೂಲಕ ಸೇವೆ ಸಲ್ಲಿಸುವ ಕಂಪನಿಯ ಮೆಚ್ಚುಗೆಗೆ ಪಾತ್ರವಾಗಬೇಕು ಎಂದರು.

ದರ್ಗಾದ ಡಾ.ಸೈಯ್ಯದ್ ತಖೀಪೀರಾ ಹುಸೈನಿ ಸಾನಿಧ್ಯ ವಹಿಸಿದ್ದರು.

ನಗರ ಯೋಜನಾ ಪ್ರಾಧಿಕಾರದ ಯೋಜನಾ ನಿರ್ದೇಶಕ ಬದ್ರುದ್ದೀನ್ ಸೌದಾಗರ, ಜಿಲ್ಲಾ ಉದ್ಯೋಗ ವಿನಿಮಯ ಅಧಿಕಾರಿ ಗುರುಪಾದಯ್ಯ ಹಿರೇಮಠ, ಪಾಲಿಕೆ ಸದಸ್ಯ ಅಲ್ತಾಫ್ ಇಟಗಿ, ಖ್ಯಾತ ವೈದ್ಯ ಡಾ.ರಿಹಾನ್ ಬಾಂಗಿ, ಬಂದೇನವಾಜ್ ಬೀಳಗಿ, ಉದ್ಯಮಿ ಅಮೀನ್ ಚೌಧರಿ, ಆಸೀಫ್ ಬಾಗವಾನ, ಸದ್ಭಾವನಾ ಟ್ರಸ್ಟ್ ಪ್ರಮುಖ ಶಫೀಕ್ ಮಣೂರ, ಅಬುಬಕರ್ ಬಿಜಾಪೂರ, ಅಲ್ಲಾಭಕ್ಷ ಬಾಗವಾನ, ಸುಹಾಸ ಕುಲಕರ್ಣಿ ಮೊದಲಾದವರು ಉಪಸ್ಥಿತರಿದ್ದರು.

## ಅತಿ ವಿರಳ "ಅಪ್ಲ್ಯಾಸ್ಟಿಕ್" ರಕ್ತ ಹೀನತೆಯಿಂದ ಬಳಲುತ್ತಿದ್ದ ಆಫ್ರಿಕಾ ಮೂಲಕ ಬಾಲಕನಿಗೆ ಯಶಸ್ವಿ ಶಸ್ತ್ರಚಿಕಿತ್ಸೆ

# ಫೋರ್ಟಿಸ್ ಆಸ್ಪತ್ರೆಯಲ್ಲಿ ಅಪರೂಪದ ಕಾಯಿಲೆಗೆ ಯಶಸ್ವಿ ಚಿಕಿತ್ಸೆ

■ ಉದಯರಶ್ಮಿ ದಿನಪತ್ರಿಕೆ



ಬೆಂಗಳೂರು: ಅಸ್ಥಿಮಜ್ಜೆಯು ರಕ್ತಕಣಗಳನ್ನು ಉತ್ಪಾದಿಸುವಲ್ಲಿ ವಿಫಲವಾಗಿದ್ದ ಕಾರಣ ಅತಿ ವಿರಳ ಕಾಯಿಲೆಯಾದ "ಅಪ್ಲ್ಯಾಸ್ಟಿಕ್" ರಕ್ತ ಹೀನತೆಯಿಂದ ಬಳಲುತ್ತಿದ್ದ 16 ವರ್ಷದ ಬಾಲಕನಿಗೆ ಫೋರ್ಟಿಸ್ ಆಸ್ಪತ್ರೆಯಲ್ಲಿ ಯಶಸ್ವಿ ಚಿಕಿತ್ಸೆ ನೀಡಲಾಗಿದೆ.

ಫೋರ್ಟಿಸ್ ಆಸ್ಪತ್ರೆಯ ಮೆಡಿಕಲ್ ಮತ್ತು ಹೆಮಟೋ ಆಂಕೊಲಾಜಿಯ ಹಿರಿಯ ನಿರ್ದೇಶಕಿ ಡಾ.ನೀತಿ ರೈಜಾದಾ, ಹೆಮಟೋ ಆಂಕೊಲಾಜಿ ಸಮಾಲೋಚಕ ಡಾ ನಿಶಿತ್ ಓಜ್ಹಾ, ಪೀಡಿಯಾಟ್ರಿಕ್ ಹೆಮಟೋ ಆಂಕೊಲಾಜಿಯ ಸಲಹೆಗಾರರಾದ ಡಾ ತನುಶ್ರೀ ಪಾಲ್ ಅವರ ವೈದ್ಯ ತಂಡ ಈ ಬಾಲಕನಿಗೆ ಸಮಯೋಚಿತವಾಗಿ ಶಸ್ತ್ರಚಿಕಿತ್ಸೆ ನಡೆಸುವ ಮೂಲಕ ಬಾಲಕನ ಜೀವ ಉಳಿಸಲಾಗಿದೆ.

ಈ ಕುರಿತು ಮಾತನಾಡಿದ ಡಾ. ನೀತಿ ರೈಜಾದಾ, ಆಫ್ರೀಕಾ ಮೂಲಕ 16 ವರ್ಷದ ಮೈಕೆಲ್ ಎಂಬ ಬಾಲಕನು ಕಳೆದ ಎರಡು ತಿಂಗಳಿನಿಂದ ತೀವ್ರವಾದ ಜ್ವರ, ಆಯಾಸ, ದೌರ್ಬಲ್ಯಗಳಿಂದ ಬಳಲುತ್ತಿದ್ದರು, ಅಷ್ಟೇ ಅಲ್ಲದೆ, ಆತನ ಬಲ ಕಿವಿಯಿಂದ ರಕ್ತಸ್ರವವಾಗಲು ಪ್ರಾರಂಭಗೊಂಡಿತ್ತು. ಇದರಿಂದ ಭಯಭೀತಗೊಂಡ ಅವರ ಕುಟುಂಬ ಆಫ್ರಿಕಾದಲ್ಲಿರುವ ಎಲ್ಲಾ ಆಸ್ಪತ್ರೆಗಳಿಗೆ ತೋರಿಸಿದರೂ ಬಾಲಕನ ಆರೋಗ್ಯ ಸಮಸ್ಯೆ ಏನೆಂದು ತಿಳಿಯಲಿಲ್ಲ. ಹೀಗಾಗಿ ಅವರು ಬೆಂಗಳೂರಿನ ಬನ್ನೇರುಘಟ್ಟ ರಸ್ತೆಯಲ್ಲಿನ ಫೋರ್ಟಿಸ್ ಆಸ್ಪತ್ರೆಗೆ ದಾಖಲಾದರು. ಇಲ್ಲಿ ಆ ಬಾಲಕನ ಸಂಪೂರ್ಣ ತಪಾಸಣೆ ಬಳಿಕ, ಆ ಬಾಲಕನಿಗೆ ಅತಿ ವಿರಳ ಅಪ್ಲ್ಯಾಸ್ಟಿಕ್ ರಕ್ತ ಹೀನತೆ ಆಗಿರುವುದು ತಿಳಿದುಬಂತು. ಇದು ಅಸ್ಥಿಮಜ್ಜೆಯು ರಕ್ತಕಣಗಳನ್ನು ಉತ್ಪಾದಿಸುವಲ್ಲಿ ವಿಫಲವಾದ ಕಾರಣ ಆ ಬಾಲಕ ರಕ್ತ ಹೀನತೆಗೆ ಒಳಗಾಗಿದ್ದ. ಹೀಗಾಗಿ ಆತನಿಗೆ ಹ್ಯಾಪ್ಲೋಡೆಂಟಿಕಲ್ ಸ್ಟೆಮ್ ಸೆಲ್ ಕಸಿ ಮಾಡುವ ಅವಶ್ಯಕತೆ ಅನಿವಾರ್ಯವಾಗಿತ್ತು. ಆದರೆ, ಬಾಲಕನ ರಕ್ತದ ಗುಂಪಿಗೆ ಹೊಂದುವಂತೆ ಸ್ಟೆಮ್‌ಸೆಲ್ ಸಿಗದೇ ಸಮಸ್ಯೆ ಎದುರಾಗಿತ್ತು. ಈ ಮಧ್ಯೆ ಬಾಲಕನ ಹಿರಿಯ ಸಹೋದರಿಯೇ ತನ್ನ ತಮ್ಮನಿಗೆ ಹ್ಯಾಪ್ಲೊಂಡೆಂಟಿಕಲ್ ದಾನ ಮಾಡಲು ಮುಂದಾದರು. ಆದರೆ, ಬಾಲಕನಿಗೆ ಬಲಕಿವಿ ಸೋಂಕಿನಿಂದ ಸೋರುತ್ತಿದ್ದ ಕಾರಣ, ಮೊದಲು ಕಿವಿ ಶಸ್ತ್ರಚಿಕಿತ್ಸೆ ಮುಂದಾಗಬೇಕಾಯಿತು. ಬಾಲಕನ ಬಲ ಕಾರ್ಟಿಕಲ್ ಮಾಸ್ಟೋಡೆಕ್ಟಮಿ (ಕಿವಿ ಸುತ್ತ ಇರುವ ಸೋಂಕಿನ ಅಂಗಾಂಶ) ತೆಗೆದು ಹಾಕಿ ಶಸ್ತ್ರಚಿಕಿತ್ಸೆ ಮಾಡಲಾಯಿತು. ಇದಾದ ಬಳಿಕ ಬಾಲಕನಿಗೆ ಹ್ಯಾಪ್ಲೋಡೆಂಟಿಕಲ್ ಸ್ಟೆಮ್ ಸೆಲ್ ಕಸಿಯನ್ನು ಯಶಸ್ವಿಯಾಗಿ ನಡೆಸಲಾಯಿತು. ಇದೀಗ ಬಾಲಕ ಗುಣಮುಖರಾಗುತ್ತಿದ್ದಾನೆ ಎಂದು ವಿವರಿಸಿದರು.

# ಕುಟುಂಬದ ಆರ್ಥಿಕತೆ ಬಲಪಡಿಸುವುದೇ ಸೂರ್ಯ ಫೌಂಡೇಶನ್ ಗುರಿ

■ ಉದಯರಶ್ಮಿ ದಿನಪತ್ರಿಕೆ



## ಸೂರ್ಯ ಫೌಂಡೇಶನ್ ನಿಂದ ಮಹತ್ತರ ಹೆಜ್ಜೆ। ರಾಜ್ಯಮಟ್ಟದ ಶೈಕ್ಷಣಿಕ ಸಮ್ಮೇಳನ ಯಶಸ್ವಿ

ಬೆಂಗಳೂರು: ಭಾರತವು ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಯಾಗಿದೆ. ನಿರುದ್ಯೋಗ ಕ್ಷೇತ್ರದಲ್ಲಿ ಸುಧಾರಣೆಗೆ ಅಗಾಧ ಅವಕಾಶವಿದ್ದು, ನಾಡಿನ ನಿರುದ್ಯೋಗಿ ಯುವಕ,

ಯುವತಿಯರಿಗೆ ಮತ್ತು ಪದವೀಧರರಿಗೆ ವಿವಿಧ ಪ್ರತಿಷ್ಠಿತ ಕಂಪನಿಗಳ ಮೂಲಕ ಉದ್ಯೋಗಾವಕಾಶ ಕಲ್ಪಿಸಿ, ಕುಟುಂಬದ ಆರ್ಥಿಕತೆಯನ್ನು ಬಲಪಡಿಸುವದೇ ನಮ್ಮ ಸೂರ್ಯ ಫೌಂಡೇಶನ್ ಮುಖ್ಯ ಗುರಿಯಾಗಿದೆ ಎಂದು ಸೂರ್ಯ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷ ಸೋಮೇಶ್ ನವೋದಯ ಹೇಳಿದರು.

ಅವರು ನಗರದ ಹೆಸರಘಟ್ಟದ ಹುರುಳಿ ಚಿಕ್ಕನಹಳ್ಳಿಯಲ್ಲಿರುವ ಇಂಡೋಗ್ಲೋಬ್ ಶಿಕ್ಷಣ ಸಂಸ್ಥೆಯಲ್ಲಿ ಬೆಂಗಳೂರಿನ ಸೂರ್ಯ ಫೌಂಡೇಶನ್ ಹಾಗೂ ಸ್ಪಾರ್ಕ್ ಅಕಾಡೆಮಿ, ಇಂಡೋಗ್ಲೋಬ್ ಇನ್ ಸ್ಟಿಟ್ಯೂಷನ್ ಹಾಗೂ ಮೈಸೂರಿನ ಕರ್ನಾಟಕ ರಾಜ್ಯ ಶಿಕ್ಷಕರ ಪ್ರತಿಭಾ ಪರಿಷತ್ ಸಹಯೋಗದಲ್ಲಿ ಜರುಗಿದ 'ರಾಜ್ಯ ಮಟ್ಟದ ಶೈಕ್ಷಣಿಕ ಸಮ್ಮೇಳನ'ದ ಎರಡನೇ ದಿನದ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಸೂರ್ಯ ಫೌಂಡೇಶನ್ ಮೂಲಕ ನಿರುದ್ಯೋಗಿ ಯುವಕರಿಗೆ ಅವರ ಇಚ್ಛೆಯನುಸಾರ ಉದ್ಯೋಗಕ್ಕೆ ಸಂಬಂಧಿತ ಕೌಶಲ್ಯಗಳು ಮತ್ತು ತರಬೇತಿಯನ್ನು ನೀಡಿ, ಸ್ವಯಂ ಪ್ರೇರಿತರಾಗಿ ಉದ್ಯೋಗದಲ್ಲಿ ತೊಡಗಿಸಿಕೊಳ್ಳುವ ಅವಕಾಶವನ್ನು ಕಲ್ಪಿಸಲಾಗುತ್ತದೆ. ನಾಡಿನ ಎಲ್ಲ ವಿದ್ಯಾವಂತ ನಿರುದ್ಯೋಗಿ ಯುವಕರು ಹಾಗೂ ಪದವೀಧರರು ಈ ಅವಕಾಶದ ಸದುಪಯೋಗ ಮಾಡಿಕೊಂಡು, ತಮ್ಮ ಕುಟುಂಬದ ಆರ್ಥಿಕ ಬೆನ್ನೆಲುಬಾಗಿ ಪರಿವರ್ತನೆ ಹೊಂದಬೇಕು ಎಂದು ಹೇಳಿದರು.

ಈ ಶೈಕ್ಷಣಿಕ ಸಮ್ಮೇಳನದ ಮೂಲಕ ರಾಜ್ಯದ ವಿವಿಧ ಜಿಲ್ಲಾ ಸಂಯೋಜಕರು,ತಾಲೂಕು ಪ್ರಧಾನ ಸಂಯೋಜಕರು ಮತ್ತು ತಾಲೂಕು ಸಂಯೋಜಕರುಗಳಿಗೆ 'ರಾಜ್ಯ ಮಟ್ಟದ ಶಿಕ್ಷಣ ಸೇವಾ ರತ್ನ' ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಅದೇ ರೀತಿಯಲ್ಲಿ 11 ವಿಭಾಗದಲ್ಲಿ 240 ಸಾಧಕರಿಗೆ ರಾಜ್ಯ ಮಟ್ಟದ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಅಧ್ಯಕ್ಷತೆ ವಹಿಸಿದ್ದ ಬೆಂಗಳೂರಿನ ಇಂಡೋಗ್ಲೋಬ್ ಇನ್ ಸ್ಟಿಟ್ಯೂಷನ್ ಸಂಸ್ಥಾಪಕ ಅಧ್ಯಕ್ಷರಾದ ಟಿ ಎಂ ಗೌಡ ಮಾತನಾಡಿ, ಇಂದಿನ ದಿನಗಳಲ್ಲಿ ಉದ್ಯೋಗಾವಕಾಶ ಮರಿಚೀಕೆಯಾಗುತ್ತಿರುವ ಸಂದರ್ಭದಲ್ಲಿ ಸೂರ್ಯ ಫೌಂಡೇಶನ್ ಮಹತ್ತರ ಹೆಜ್ಜೆಯನ್ನಿಟ್ಟು, ನಿರುದ್ಯೋಗಿಗಳ ಪಾಲಿಗೆ ಆಶಾಕಿರಣವಾಗಿದೆ. ಇದರ ಸದುಪಯೋಗ ಇಡೀ ರಾಜ್ಯದ ಮೂಲೆ ಮೂಲೆಗೂ ತಲುಪಲಿ ಎಂದು ಆಶಿಸಿದರು.

ಇದೇ ಸಂದರ್ಭದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಯ್ಕೆಯಾದ ಪ್ರತಿಭಾನ್ವಿತ ಉತ್ತಮ ಪ್ರಾಥಮಿಕ ಶಾಲಾ ಶಿಕ್ಷಕರಿಗೆ, ಉತ್ತಮ ಶಾಲಾ-ಕಾಲೇಜುಗಳಿಗೆ, ಉತ್ತಮ ತರಬೇತುದಾರರಿಗೆ, ಉತ್ತಮ ನಿರೂಪಕ ಶಿಕ್ಷಕರಿಗೆ,

ಅತ್ಯುತ್ತಮ ಶಾಲೆಗಳಿಗೆ, ಉತ್ತಮ ಉಪನ್ಯಾಸಕರಿಗೆ,

ಉತ್ತಮ ಪ್ರೌಢಶಾಲಾ ಶಿಕ್ಷಕರಿಗೆ, ಉತ್ತಮ ಮುಖ್ಯ ಶಿಕ್ಷಕರಿಗೆ ಉತ್ತಮ ಸಿಆರ್‌ಪಿ, ಬಿಆರ್‌ಪಿ, ಬಿಐಆರ್‌ಟಿ ಗಳಿಗೆ, ಸಾಧಕ ಮಹಿಳೆಯರಿಗೆ, ಯುವ ಸಾಧಕರಿಗೆ ಸೂರ್ಯ ಫೌಂಡೇಶನ್ ವತಿಯಿಂದ ರಾಜ್ಯ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಸಮಾರಂಭದಲ್ಲಿ ಸುವರ್ಣ ಕರ್ನಾಟಕ ಡಿಜಿಟಲ್ ಮೀಡಿಯಾ ಅಸೋಷಿಯೇಷನ್ ಅಧ್ಯಕ್ಷರಾದ ಗಂಡಸಿ ಸದಾನಂದಸ್ವಾಮಿ, ಮೈಸೂರಿನ ಕರ್ನಾಟಕ ರಾಜ್ಯ ಶಿಕ್ಷಕರ ಪ್ರತಿಭಾ ಪರಿಷತ್ತಿನ ಅಧ್ಯಕ್ಷ ಪಿ ಮಹೇಶ್, ಮುಖ್ಯ ಅತಿಥಿಗಳಾಗಿ ಬೆಂಗಳೂರಿನ ಎಜಿಎಸ್ ಕಾರ್ಟ್ ಪ್ರೈ,ಲಿ.ನ ಸಂಸ್ಥಾಪಕರಾದ ವಿನಯಕುಮಾರ್ ಹಾಗೂ ದಿಲೀಪ್ ಕುಮಾರ್ ಆರ್, ವೃದ್ಧಿ ಲರ್ನಿಂಗ್ ಎಕ್ಸ್ ಚೇಂಜ್ ನ ಸಂಸ್ಥಾಪಕರಾದ ಸಂದೀಪ್ ವಿಜಯನ್ ಆಗಮಿಸಿದ್ದರು.

ಕರ್ನಾಟಕ ರಾಜ್ಯ ಶಿಕ್ಷಕರ ಪ್ರತಿಭಾ ಪರಿಷತ್ತಿನ ರಾಜ್ಯ ಪ್ರಧಾನ ಕಾರ್ಯದರ್ಶಿ ಸಂತೋಷಕುಮಾರ ಎಸ್ ಬಂಡೆ, ರಾಜ್ಯ ಉಪಾಧ್ಯಕ್ಷರಾದ ವ್ಹಿ ಜಿ ಅಗ್ರಹಾರ, ರೇಖಾ ದಳವಾಯಿ, ಹಿರಿಯ ನಿರ್ದೇಶಕ ನಾಗಪ್ಪ ಮುಶೆಪ್ಪನವರ, ರಾಜ್ಯ ತಾಂತ್ರಿಕ ವಿಭಾಗದ ಮುಖ್ಯಸ್ಥ ಚಂದ್ರಶೇಖರ್ ನಾಯಕ್, ರಾಜ್ಯ ಸಹಕಾರ ಸಮಿತಿಯ ಮುಖ್ಯಸ್ಥೆ ಉಮಾ ಗುಡ್ಡದ ಸೇರಿದಂತೆ ಪ್ರತಿಭಾ ಪರಿಷತ್ತಿನ ವಿವಿಧ ಸಮಿತಿಯ ಮುಖ್ಯಸ್ಥರು, ಮಾರ್ಗದರ್ಶಕರು, ಸದಸ್ಯರು ಉಪಸ್ಥಿತರಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR